MAG(2) PRB/CR/70/2022-23 REG NO: KARKAN27951

ಮುಂಜಾನೆ ವಾರ್ತೆ

MUNJANE VARTHE

ಇ–ಪೇಪರ್: www.munjaneevartheepaper.com

EDITOR: H.L.AMARANATH

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ 9663122276

website: munjanevarthe.com

Volume: 02 Issue: 93 | ಸಂಪುಟ: 02 | ಸಂಚಿಕೆ: 93 | ಪುಟಗಳು: 04 | munjanevarthe | 15 WEDNESDAY MAY 2024 | 15 ಬುಧವಾರ ಮೇ 2024 | ₹ 2

ಮಹಾಪುರುಷರ ಜಯಂತಿಗಳನ್ನು ಆಚರಿಸುವಂತೆ ಸಲಹೆ — ವಿವರಪುಟ 02

ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸಲು ಸೂಚನೆ — ವಿವರಪುಟ 03

ಅಧ್ಯಕ್ಷರಾಗಿ ಎಂ.ಬಿ ರತಿ ಶ್ರೀಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ — ವಿವರಪುಟ 04

ವಾರಣಾಸಿಯಲ್ಲಿ ಮೋದಿ ಅಬ್ಬರ

ವಾರಣಾಸಿ: 2024ರ ಲೋಕಸಭೆ ಚುನಾವಣೆಗೆ ಉತ್ತರ ಪ್ರದೇಶದ ವಾರಣಾಸಿ ಲೋಕಸಭಾ ಕ್ಷೇತ್ರದಿಂದ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮಂಗಳವಾರ ನಾಮಪತ್ರ ಸಲ್ಲಿಸಿದ್ದಾರೆ, ಮೂರನೇ ಅವಧಿಗೆ ದಾಖಲೆಯ ಅಂತರದಿಂದ ಗೆಲುವಿನ ಉತ್ಸಾಹ ಮತ್ತು ನಿರೀಕ್ಷೆಯಲ್ಲಿದ್ದಾರೆ.

ಪ್ರಧಾನಿ ಮೋದಿಯವರು ಪ್ರತಿನಿಧಿಸುತ್ತಿರುವ ವಾರಣಾಸಿ ಕ್ಷೇತ್ರದಲ್ಲಿ ಜೂನ್ 1 ರಂದು ಸಾರ್ವತ್ರಿಕ ಚುನಾವಣೆಯ ಏಳನೇ ಮತ್ತು ಕೊನೆಯ ಹಂತದ ಮತದಾನ ನಡೆಯಲಿದೆ. ಸತತ ಮೂರನೇ ಬಾರಿಗೆ

ನಾಮಪತ್ರ ಸಲ್ಲಿಕೆಗೂ ಮುನ್ನ ಪ್ರಧಾನಿ ಮೋದಿ ಗಂಗಾನದಿಯ ದಶಾಶ್ವಮೇಧ ಘಾಟ್‌ನಲ್ಲಿ ಪ್ರಾರ್ಥನೆ ಸಲ್ಲಿಸಿದರು. ನಮೋ ಘಾಟ್‌ಗೆ ಕ್ರೂಸ್ ಹತ್ತುವ ಮುನ್ನ ಸ್ನಾನ ಮಾಡಿದರು. ಇಂದು ಗಂಗಾ ಸಪ್ತಮಿಯ ಶುಭ ದಿನವಾಗಿದ್ದು, ಘಾಟ್‌ನಲ್ಲಿ ಗಂಗಾ ಆರತಿ ಮಾಡಿದರು. ಕಾಲ ಭೈರವ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು.

ತಮ್ಮ ಪಕ್ಷದ ಗೆಲುವಿನ ವಿಶ್ವಾಸವನ್ನು ವ್ಯಕ್ತಪಡಿಸಿದ ಪ್ರಧಾನಿ ಮೋದಿ, ಸಂಸತ್ತಿನ ಚುನಾವಣೆಯ ಫಲಿತಾಂಶ ಘೋಷಣೆ ನಂತರ ಮುಂದಿನ ತಿಂಗಳು ಜಿ –7 ಶೃಂಗಸಭೆಯಲ್ಲಿ ಭಾಗವಹಿಸುವುದಾಗಿ ಹೇಳಿದ್ದಾರೆ. ತಮ್ಮ ಲೋಕಸಭಾ ಕ್ಷೇತ್ರವಾದ ವಾರಣಾಸಿಯಿಂದ ನಾಮಪತ್ರ ಸಲ್ಲಿಸುವ ಮುನ್ನ ಮಾಧ್ಯಮದವರೊಂದಿಗೆ ಮಾತನಾಡಿದ ಅವರು "ನನಗೆ ಈಗಾಗಲೇ (ಜಿ7 ಗೆ) ಆಹ್ವಾನ ಬಂದಿದೆ. ನಾನು ಶೃಂಗಸಭೆಗೆ ತಯಾರಿ ನಡೆಸುತ್ತಿದ್ದೇನೆ. ಪ್ರಮಾಣ ವಚನ ಸ್ವೀಕಾರ ಸಮಾರಂಭದ ನಂತರ ಅಲ್ಲಿಗೆ ಹೋಗುತ್ತೇನೆ ಎಂದಿದ್ದಾರೆ. ನಾಮಪತ್ರ ಸಲ್ಲಿಕೆಗೂ ಮುನ್ನ ಪ್ರಧಾನಿ ಮೋದಿ ಗಂಗಾನದಿಯ ದಶಾಶ್ವಮೇಧ ಘಾಟ್‌ನಲ್ಲಿ ಪ್ರಾರ್ಥನೆ ಸಲ್ಲಿಸಿದರು. ನಮೋ ಘಾಟ್‌ಗೆ ಕ್ರೂಸ್ ಹತ್ತುವ ಮುನ್ನ ಸ್ನಾನ ಮಾಡಿದರು. ಇಂದು ಗಂಗಾ ಸಪ್ತಮಿಯ ಶುಭ ದಿನವಾಗಿದ್ದು, ಘಾಟ್‌ನಲ್ಲಿ ಗಂಗಾ ಆರತಿ ಮಾಡಿದರು. ಕಾಲ ಭೈರವ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು.

ವಾರಣಾಸಿ ಕ್ಷೇತ್ರ ಭಾರತೀಯ ಜನತಾ ಪಕ್ಷ ಮತ್ತು ಪ್ರಧಾನಿ ಮೋದಿಯವರ ಭದ್ರಕೋಟೆಯಾಗಿದೆ. ಅವರು 2014 ಮತ್ತು 2019 ರ ಲೋಕಸಭೆ ಚುನಾವಣೆಯಲ್ಲಿ ಎರಡು ಬಾರಿ ಗೆದ್ದಿದ್ದರು. ವಾರಣಾಸಿಯಲ್ಲಿ ಪ್ರಧಾನಿ ಮೋದಿ ವಿರುದ್ಧ ಉತ್ತರ ಪ್ರದೇಶ ಕಾಂಗ್ರೆಸ್ ಮುಖ್ಯಸ್ಥ ಅಜಯ್ ರೈ ಅವರನ್ನು ಕಾಂಗ್ರೆಸ್ ಕಣಕ್ಕಿಳಿಸಿದೆ. ಲೋಕಸಭೆಯಲ್ಲಿ ಅಜಯ್ ರೈ ಅವರು ಪ್ರಧಾನಿ ಮೋದಿ ಅವರನ್ನು ಎದುರಿಸುತ್ತಿರುವುದು ಇದು ಮೂರನೇ ಬಾರಿ.

2019 ರ ಲೋಕಸಭಾ ಚುನಾವಣೆಯಲ್ಲಿ, ಪಿಎಂ ಮೋದಿ ಅವರು 6,74,664 ಕ್ಕೂ ಹೆಚ್ಚು ಮತಗಳೊಂದಿಗೆ ಗೆದ್ದಿದ್ದರು. ಶೇಕಡಾ 63.6 ರಷ್ಟು ಮತಗಳನ್ನು ಗಳಿಸಿದ್ದರು. 2014 ರಲ್ಲಿ, ಪ್ರಧಾನಿ ಮೋದಿ ಗುಜರಾತ್‌ನ ವಡೋದರಾ ಮತ್ತು ಉತ್ತರ ಪ್ರದೇಶದ ವಾರಣಾಸಿಯಿಂದ ಎರಡು ಲೋಕಸಭಾ ಸ್ಥಾನಗಳಿಗೆ ಸ್ಪರ್ಧಿಸಿದ್ದರು.

ಮಂಗಳವಾರ ನಾಮಪತ್ರ ಸಲ್ಲಿಕೆಗೂ ಮುನ್ನ ಕಾಶಿಯ ಕೊತ್ವಾಲ್ ಶ್ರೀ ಕಾಲಭೈರವ್ ಜೀ ದೇವಸ್ಥಾನದಲ್ಲಿ ಮೋದಿ ವಿಶೇಷ ಪೂಜೆ ಸಲ್ಲಿಸಿದರು.

ಕಾಂಗ್ರೆಸ್ ಆಡಳಿತದಲ್ಲಿ ಶೈಕ್ಷಣಿಕ ದುರಾಡಳಿತ

ಬೆಂಗಳೂರು: ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಆಡಳಿತಕ್ಕೆ ಬಂದು ಒಂದು ವರ್ಷ ಪೂರೈಸುತ್ತಿದೆ. ಈ ಸಂದರ್ಭದಲ್ಲಿ ಕಾಂಗ್ರೆಸ್ ಸರಕಾರವು ತನ್ನ ದುರಾಡಳಿತದ ಮೂಲಕ ಶಿಕ್ಷಣ ಕ್ಷೇತ್ರವನ್ನು ಹಾಳುಗಡೆವಿದೆ ಎಂದು ವಿಧಾನಪರಿಷತ್ ಮಾಜಿ ಸದಸ್ಯ ಅರುಣ್ ಶಹಾಪೂರ ಅವರು ಆಕ್ಷೇಪಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲಾ ಶಿಕ್ಷಣ ವ್ಯವಸ್ಥೆಯಡಿ ರಾಜ್ಯ ಪಠ್ಯಕ್ರಮದಲ್ಲಿ 1 ಕೋಟಿಗೂ ಹೆಚ್ಚು ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. 9 ಲಕ್ಷದಷ್ಟು ವಿದ್ಯಾರ್ಥಿಗಳು 10ನೇ ತರಗತಿ ಪರೀಕ್ಷೆ ಬರೆದಿದ್ದಾರೆ. ಕರ್ನಾಟಕ ಸರಕಾರ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಈ ಇಲಾಖೆಯನ್ನು ನಿರ್ವಹಿಸುವಲ್ಲಿ ವಿಫಲವಾಗಿದ್ದಾರೆ ಎಂದು ಟೀಕಿಸಿದರು. 1 ಕೋಟಿ ಮಕ್ಕಳ ಭವಿಷ್ಯವನ್ನು ಅತಂತ್ರಕ್ಕೆ ತಳ್ಳುವ ಕೆಲಸ ಮಾಡಿದ್ದಾರೆ ಎಂದು ದೂರಿದರು.

ಸ್ವಾತಂತ್ರ್ಯ ಬಂದ ಬಳಿಕ ಅತ್ಯಂತ ಕೆಟ್ಟ ಪರೀಕ್ಷೆ ನಡೆದಿದ್ದರೆ ಅದು ಮಧು ಬಂಗಾರಪ್ಪ ಅವರ ನೇತೃತ್ವದ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಎಂದು ಅವರು ವಿಷಾದದಿಂದ ತಿಳಿಸಿದರು. ದಿಕ್ಕು ದೆಸೆಯಿಲ್ಲದ ಶಿಕ್ಷಣವನ್ನು ನಿರ್ಮಿಸಿದ್ದಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಪಕ್ಷ ಇವತ್ತು ಇಡೀ ಕರ್ನಾಟಕದಲ್ಲಿ ಚುನಾವಣಾ ಚಾಣಕ್ಯರ ಕಪಿಮುಷ್ಟಿಗೆ ಸಿಲುಕಿದೆ. ಚುನಾವಣಾ ಚಾಣಕ್ಯರೇ ಕಾಂಗ್ರೆಸ್ಸಿನ ನೀತಿ ನಿರೂಪಿಸುತ್ತಿದ್ದಾರೆ. ಪಾಠಗಳು ಯಾವುದೇ ಶಾಲೆಯಲ್ಲಿ ಮಕ್ಕಳ ವರೆಗೆ ತಲುಪಲಿಲ್ಲ. ಎನ್‌ಇಪಿ ಜಾರಿ ಇಲ್ಲ ಎಂಬ ಗೊಂದಲಗಳಿಗೆ ಕೈಹಾಕಿದ್ದರು. ಕೊನೆಗೆ ಪರೀಕ್ಷೆಯು ಪ್ರಹಸನ ಎಂಬಂತೆ ನಡೆದಿದೆ ಎಂದು ತಿಳಿಸಿದರು.

5 ನೇ ತರಗತಿ, 8 ನೇ ತರಗತಿ, 9 ನೇ ತರಗತಿ, 11ನೇ ತರಗತಿ ಪರೀಕ್ಷೆ ನಡೆಯುತ್ತದೆಯೋ ಇಲ್ಲವೋ

ಎಂಬ ವಿಚಾರ ದಿನವೂ ಬೆಳಿಗ್ಗೆ ಪಾಲಕರಿಗೆ ತಲೆನೋವಾಗಿ ಪರಿಗಣಮಿಸಿತ್ತು ಎಂದು ತಿಳಿಸಿದರು.

ಹೈಕೋರ್ಟ್, ಸುಪ್ರೀಂ ಕೋರ್ಟ್, ವಿಭಾಗೀಯ ಪೀಠ– ಹೀಗೆ ಸಮಸ್ಯೆಯನ್ನು ಪ್ರಶ್ನಿಸಲಾಯಿತು. ಆಡಳಿತ ನಡೆಸುವವರಿಗೆ ಈ ರೀತಿಯ ದೃಢ ನಿರ್ಣಯ ತೆಗೆದುಕೊಳ್ಳುವ ಮೊದಲು ಕೋರ್ಟಿನಲ್ಲಿ ತೆಗೆದುಕೊಳ್ಳಬೇಕಾದ ಕ್ರಮಗಳ ಸಾಮಾನ್ಯ ಜ್ಞಾನ ಈ ಸರಕಾರಕ್ಕೆ ಇದೆಯೇ ಎಂದು ಪ್ರಶ್ನಿಸಿದರು. ಅವರು ಅಲ್ಲಿ ಎಡವಿದರು ಎಂಬ ಕಾರಣಕ್ಕೆ 1 ಕೋಟಿ ಮಕ್ಕಳು ಮತ್ತು ಅವರ ಪಾಲಕರಿಗೆ ಒತ್ತಡ ಕೊಡುವ ಕೆಲಸವನ್ನು ಈ ಸರಕಾರ ಮಾಡಿತ್ತು ಎಂದು ಟೀಕಿಸಿದರು.

ಈ ಪರೀಕ್ಷೆಗಳ ಬಗ್ಗೆ ಈಗಲೂ ದೃಢ ನಿಲುವನ್ನು ಈ ಸರಕಾರ ತೆಗೆದುಕೊಂಡಿಲ್ಲ. 10ನೇ ತರಗತಿ ಹಾಗೂ ಪಿಯುಸಿಗೆ 3 ಪರೀಕ್ಷೆ (10– 1,2,3), (ಪಿಯು– 1,2,3) ಮಾಡಲು ಹೊರಟವರು ಮಕ್ಕಳ, ಪಾಲಕರ ಒತ್ತಡ, ಗೊಂದಲವನ್ನು ಯೋಚಿಸಿಲ್ಲ. ಯಾವ ಪರೀಕ್ಷೆ, ಪರೀಕ್ಷೆ ಬರೆದವರು ಯಾರು, ಯಾರಿಂದ ಮೌಲ್ಯಮಾಪನ ಎಂಬ ದೊಡ್ಡ ಗೊಂದಲಕ್ಕೆ ಇದು ಕಾರಣವಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಇಲಾಖೆಗೂ ಈ ಕುರಿತು ಸ್ಪಷ್ಟತೆ ಇಲ್ಲ. 3 ಪರೀಕ್ಷೆ ಇವರೇನು ಪುಕ್ಕಟೆ ಮಾಡುತ್ತಾರಾ ಎಂದು ಕೇಳಿದರು.

ಪರೀಕ್ಷೆ ಎಂದರೆ ಸರಕಾರಕ್ಕೆ ಒಂದು ಉದ್ಯಮವೇ?

ಒಂದು ಪರೀಕ್ಷೆಗೆ ರೂ. 410, 2 ಪರೀಕ್ಷೆಗೆ 510, 3 ಆದರೆ 710 ರೂ. ಪಾವತಿಸಬೇಕು. ಪರೀಕ್ಷೆ ಎಂದರೆ ಸರಕಾರಕ್ಕೆ ಒಂದು ಉದ್ಯಮವೇ? ಪ್ರತಿಯೊಂದು 10ನೇ ಪರೀಕ್ಷೆ ನಡೆಯುವ ಕೇಂದ್ರಕ್ಕೆ ವೆಬ್ ಕಾಸ್ಟಿಂಗ್ ಅಳವಡಿಸಲು ಆದೇಶ ಮಾಡಿ ಒತ್ತಡ ಹೇರುವ ಹಾಗೂ ಯಾಕಾದರೂ ಪರೀಕ್ಷಾ ಕೇಂದ್ರ ಮಾಡಿದ್ದೇವೋ ಎಂದು ಯೋಚಿಸುವ ಪರಿಸ್ಥಿತಿಯನ್ನು ಸರಕಾರ ನಿರ್ಮಿಸಿತ್ತು ಎಂದು ದೂರಿದರು.

10ನೇ ತರಗತಿ ಪರೀಕ್ಷೆ ಎಂದರೆ ಮಕ್ಕಳನ್ನು ಭಯದ ವಾತಾವರಣದಲ್ಲಿ ಇಡಲಾಯಿತು. 10ನೇ ತರಗತಿ ಪರೀಕ್ಷೆಯಲ್ಲಿ ನೈಜ ಮೌಲ್ಯಮಾಪನ ಮಾಡಿದ್ದರೆ ಫಲಿತಾಂಶ ಪಾತಾಳಕ್ಕೆ ಕುಸಿಯಲಿದೆ ಎಂಬುದು ಅವರಿಗೆ ಅರ್ಥವಾಯಿತು.

ಇಡೀ ರಾಜ್ಯದ ಶಿಕ್ಷಕರು, ಶಿಕ್ಷಣ ತಜ್ಞರು ಮತ್ತು ಡಯಟ್ ಮತ್ತು ಇಲಾಖೆಯನ್ನು ಕತ್ತಲಲ್ಲಿ ಇಡಲಾಯಿತು. ಇವರು ಸ್ಥಾಪಿಸಿದ ಕೆಎಸ್‌ಇಇ ಮೂಲಕ ಉತ್ತೀರ್ಣ ಅಂಕವನ್ನು 35ರಿಂದ 25ಕ್ಕೆ ಇಳಿಸಿದ್ದಾರೆ. ಇದು ಶಿಕ್ಷಣ ಕ್ಷೇತ್ರ ಹಾಳು ಮಾಡಿದ ಈ ಸರಕಾರದ ಸಾಧನೆ ಎಂದು ಟೀಕಿಸಿದರು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ಮಾಜಿ ಶಾಸಕ ಪಿ. ರಾಜೀವ್, ರಾಜ್ಯ ವಕ್ತಾರೆ ಕು. ಸುರಭಿ ಹೊದಿಗೆರೆ ಅವರು ಉಪಸ್ಥಿತರಿದ್ದರು.

ಐಟಿ ಇಲಾಖೆಯಲ್ಲಿ ಅಗ್ನಿ ಅವಘಡ

ನವದೆಹಲಿ: ದೆಹಲಿಯ ಆದಾಯ ತೆರಿಗೆ ಇಲಾಖೆಯ ಸಿಆರ್ ಕಟ್ಟಡದಲ್ಲಿ ಮಂಗಳವಾರ ಭಾರಿ ಬೆಂಕಿ ಕಾಣಿಸಿಕೊಂಡಿದ್ದು, ಅಗ್ನಿ ಅವಘಡದಲ್ಲಿ ಕಚೇರಿಯ ಅಧೀಕ್ಷಕರಾಗಿ ಕೆಲಸ ಮಾಡುತ್ತಿದ್ದ 46 ವರ್ಷದ ವ್ಯಕ್ತಿ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಐಟಿಒ ಪ್ರದೇಶದ ಸಿಆರ್ ಬಿಲ್ಡಿಂಗ್‌ನ ಮೂರನೇ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಂಡಿರುವ ಕುರಿತು ಇಂದು ಮಧ್ಯಾಹ್ನ ಪಿಸಿಆರ್ ಕರೆ ಬಂದಿತ್ತು.

"ತಕ್ಷಣ ಅಗ್ನಿಶಾಮಕ ಇಲಾಖೆ ಮತ್ತು ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ಧಾವಿಸಿದರು. ಬೆಂಕಿಯನ್ನು ಹತೋಟಿಗೆ ತರಲಾಯಿತು ಮತ್ತು ಒಟ್ಟು ಏಳು ಜನರನ್ನು ಅಲ್ಲಿಂದ ರಕ್ಷಿಸಲಾಯಿತು. 46 ವರ್ಷದ ವ್ಯಕ್ತಿಯೊಬ್ಬರು ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಅವರು ಕಚೇರಿ ಸೂಪರಿಂಟೆಂಡೆಂಟ್ ಆಗಿ ಕೆಲಸ ಮಾಡುತ್ತಿದ್ದರಂತೆ" ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದೆಹಲಿ ಅಗ್ನಿಶಾಮಕ ಸಿಬ್ಬಂದಿ ಐವರು ಪುರುಷರು ಮತ್ತು ಇಬ್ಬರು ಮಹಿಳೆಯರು ಸೇರಿದಂತೆ ಏಳು ಜನರನ್ನು ರಕ್ಷಿಸಿದ್ದಾರೆ ಮತ್ತು ಸಣ್ಣಪುಟ್ಟ ಗಾಯಗೊಂಡ ಒಬ್ಬ ವ್ಯಕ್ತಿಯನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಿದ್ದಾರೆ ಎಂದು ಅವರು ಹೇಳಿದರು. ನಾವು ಒಟ್ಟು 21 ಅಗ್ನಿಶಾಮಕ ಟೆಂಡರ್‌ಗಳನ್ನು ರವಾನಿಸಿದ್ದೇವೆ. ಹೆಚ್ಚಿನ ತನಿಖೆಗಾಗಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ನಾವು ಸ್ಥಳೀಯ ಪೊಲೀಸರಿಗೆ ಈ ವಿಷಯದ ಬಗ್ಗೆ ಮಾಹಿತಿ ನೀಡಿದ್ದೇವೆ ಎಂದು ದೆಹಲಿ ಅಗ್ನಿಶಾಮಕ ಸೇವೆಗಳ ಅಧಿಕಾರಿಗಳು ತಿಳಿಸಿದ್ದಾರೆ.

ವಿವಿ ಎಡವಟ್ಟಿಗೆ ಪರೀಕ್ಷೆ ರದ್ದು

ಕೊಪ್ಪಳ: ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪರೀಕ್ಷೆಯಲ್ಲಿ ಎಡವಟ್ಟು ಮಾಡಿದೆ. ವಿಶ್ವವಿದ್ಯಾಲಯವು ಪ್ರಶ್ನೆ ಪತ್ರಿಕೆಯನ್ನೇ ಅದಲು ಬದಲು ಮಾಡಿ, ಪರೀಕ್ಷೆ ನಡೆಸಿದ್ದು, ಕೊಪ್ಪಳ ಸೇರಿ ಹಲವೆಡೆ ಈ ಅವಾಂತರ ಜರುಗಿದೆ. ವಿವಿ ವ್ಯಾಪ್ತಿಯ 145 ಕಾಲೇಜುಗಳಲ್ಲಿ ಪ್ರಶ್ನೆ ಪತ್ರಿಕೆ ಅದಲು ಬದಲು ಆಗಿರುವುದು ಖಚಿತಪಡುತ್ತಿದ್ದಂತೆ, ಇಡೀ ಪರೀಕ್ಷೆಯನ್ನೇ ರದ್ದು ಮಾಡಲಾಗಿದೆ.

ಇಂದು ಮಂಗಳವಾರ ಬಿ ಎ ಪದವಿಯ ಮೂರನೇ ಸೆಮಿಸ್ಟರ್ ನ ಸಮಾಜಶಾಸ್ತ್ರ ಪರೀಕ್ಷೆ ನಡೆಯಬೇಕಿತ್ತು. ಮೂರನೇ ಸೆಮಿಸ್ಟರ್ ಬದಲಾಗಿ ಎರಡನೇ ಸೆಮಿಸ್ಟರ್ ನ ಪ್ರಶ್ನೆ ಪತ್ರಿಕೆ ನೀಡಿ ವಿಶ್ವವಿದ್ಯಾಲಯ ಅಚಾತುರ್ಯ ಮೆರೆದಿದೆ. ಮೂರನೇ ಸೆಮಿಸ್ಟರ್ ಪರೀಕ್ಷೆಗೆ ಸಿದ್ಧರಾಗಿ ಬಂದಿದ್ದ ವಿದ್ಯಾರ್ಥಿಗಳು ಎರಡನೇ ಸೆಮಿಸ್ಟರ್ ಪ್ರಶ್ನೆ ಪತ್ರಿಕೆ ನೋಡಿ ಗಾಬರಿಗೊಂಡಿದ್ದಾರೆ. ತಕ್ಷಣವೇ, ವಿಶ್ವವಿದ್ಯಾಲಯದ ಈ ಮಹಾ ಎಡವಟ್ಟನ್ನು ವಿದ್ಯಾರ್ಥಿಗಳು ಪ್ರಾಚಾರ್ಯರ ಗಮನಕ್ಕೆ ತಂದಿದ್ದಾರೆ.

ಕಾಲೇಜುಗಳ ಮುಖ್ಯಸ್ಥರು ಕೂಡ ಕೂಡಲೇ ಪ್ರಶ್ನೆ ಪತ್ರಿಕೆ ಬದಲಾವಣೆಯ ಎಡವಟ್ಟನ್ನು ವಿವಿ ಗಮನಕ್ಕೆ ತಂದಿದ್ದಾರೆ. ತತ್ಪರಿಣಾಮ ವಿಶ್ವವಿದ್ಯಾಲಯವು ಬಿಎ ಮೂರನೇ ಸೆಮಿಸ್ಟರ್ ಪರೀಕ್ಷೆಯನ್ನು ಮುಂದೂಡಿದೆ. ಇದೀಗ ಇಂದು ರದ್ದಾಗಿರುವ ಪರೀಕ್ಷೆಗೆ ಮರು ದಿನಾಂಕ ನಿಗದಿಪಡಿಸಬೇಕಿದೆ.

ಕುಮಾರಣ್ಣ ಯಾವ ತಿಮಿಂಗಿಲ ಬೇಕಾದರೂ ಹಿಡಿಯಲಿ: ಡಿಕೆಶಿ

ಬೆಂಗಳೂರು: ಪೆನ್‌ಡ್ರೈವ್ ವಿಚಾರದಲ್ಲಿ ಕುಮಾರಣ್ಣ ಯಾವ ತಿಮಿಂಗಿಲ ವನ್ನಾದರೂ ಹಿಡಿಯಲಿ. ಹಿಡಿದು, ಬಡಿದು ಅವರೇ ನುಂಗಿಕೊಳ್ಳಲಿ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾಜಿ ಸಿಎಂ ಕುಮಾರಸ್ವಾಮಿಗೆ ತಿರುಗೇಟು ನೀಡಿದರು.

ಸದಾಶಿವನಗರ ನಿವಾಸದಲ್ಲಿ ಮಂಗಳವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಅವರಿಗೆ ಯಾರನ್ನು ಹಿಡಿದು ಬಡಿದು ಒಳಗೆ ಹಾಕಬೇಕು ಅನ್ನಿಸುತ್ತದೋ ಅವರನ್ನು ಒಳಗೆ ಹಾಕಿಸಲಿ. ತಿಮಿಂಗಿಲುಗಳನ್ನು ಅವರೇ ನುಂಗಿಕೊಳ್ಳಲಿ. ನಾನು ನಿರ್ದೇಶಕನೂ ಅಲ್ಲ, ನಿರ್ಮಾಪಕನೂ ಅಲ್ಲ. ನಾನು ಕೇವಲ ಪ್ರದರ್ಶಕ ಅಷ್ಟೇ ಎಂದರು.

ಶಾಸಕರು, ಸಚಿವರಿಂದ ಮಾತನಾಡಿಸುತ್ತಿರುವವರು ಯಾರು ಎಂದು

ಪರೋಕ್ಷವಾಗಿ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸುತ್ತ, ಬೇರೆಯವರಿಂದ ಮಾತನಾಡಿಸುವ, ಪ್ರತಿಭಟನೆ ಮಾಡಿಸುವ, ಬೇರೆಯವರ ಮೇಲೆ ಅನಗತ್ಯ ಆರೋಪ ಮಾಡುವ ಅಗತ್ಯ ನನಗಿಲ್ಲ.

ನಾನು ಚುನಾವಣಾ ಪ್ರಚಾರದಲ್ಲಿ ನಿರತನಾಗಿದ್ದೇನೆ. ಅಲ್ಲದೇ ನಾನು ಒಂದು ರಾಜಕೀಯ ಪಕ್ಷದ ಅಧ್ಯಕ್ಷ. ಈ ಪ್ರಕರಣದಲ್ಲಿ ಒಂದು ಸಣ್ಣ ಹಸ್ತಕ್ಷೇಪವಿದ್ದರೂ ಅದಕ್ಕೆ ಬೆಲೆ ತೆರಲು ನಾನು ಸಿದ್ಧ. ಈಗ ಆ ವಿಚಾರವಾಗಿ ನಾನು ಮಾತನಾಡುವುದಿಲ್ಲ. ಸಮಯ ಎಲ್ಲದಕ್ಕೂ ಉತ್ತರ ನೀಡಲಿದೆ ಎಂದು ಡಿಕೆಶಿ ಹೇಳಿದ್ರು.

ರೇವಣ್ಣ ಅವರ ಪರಿಸ್ಥಿತಿ ನೋಡಿ ನನಗೂ ಬೇಸರವಾಗುತ್ತಿದೆ. ಅವರದು ದೊಡ್ಡ ಕುಟುಂಬ, ಈ ರೀತಿ ಆಗಬಾರದು ಎಂದು ಬಯಸುತ್ತೇನೆ.

ಅವರು ನನಗೆ ಏನಾದಲೂ ಬಯಸಲಿ. ಆದರೆ, ನಾನು ಮಾತ್ರ ಅವರಿಗೆ ಕೆಟ್ಟದ್ದು ಬಯಸುವುದಿಲ್ಲ. ನಾನು ಪ್ರಕೃತಿ ನಿಯಮ, ನ್ಯಾಯದ ಮೇಲೆ ನಂಬಿಕೆ ಇಟ್ಟವನು. ನಾನು ರಾಜಕೀಯ ಷಡ್ಯಂತ್ರಕ್ಕೆ ಗುರಿ ಆಗಿದ್ದವನೇ ಮತ್ತು ಅದರ ನೋವು ಅನುಭವಿಸಿದವನೇ. ಆ ವೇಳೆಯಲ್ಲಿ ನಾನು ಎಷ್ಟು ಗಟ್ಟಿಯಾಗಿ, ಧೈರ್ಯವಾಗಿ, ಆತ್ಮವಿಶ್ವಾಸದಿಂದ ಇದ್ದೆ ಎಂಬುದು ನನಗೆ ಮಾತ್ರ ಗೊತ್ತಿದೆ. ದೇವರು ನನಗೆ ಎಲ್ಲಾ ರೀತಿಯ ರಕ್ಷಣೆ ನೀಡಿದ್ದು, ನಾನು ಬೇರೆಯವರಿಗೆ ಕೆಟ್ಟದ್ದನ್ನು ಬಯಸುವುದಿಲ್ಲ. ಆದರೆ, ನನ್ನ ಬ್ರದರ್ ಕುಮಾರಣ್ಣನಿಗೆ ವಿಧಾನಸಭೆಯಲ್ಲಿ ಉತ್ತರ ನೀಡುತ್ತೇನೆ ಎಂದು ಡಿಸಿಎಂ ಹೇಳಿದರು.

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುವುದು ಈಗ ಮತ್ತಷ್ಟು ಸುಲಭ

ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjaneevartheepaper.com

ಮಹಾಪುರುಷರ ಜಯಂತಿಗಳನ್ನು ಎಲ್ಲಾ ಸಮುದಾಯ ಆಚರಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸಲಹೆ

ವರದಿ ಆರ್ ಉಮೇಶ್ ಮಲಾರಪಾಳ್ಯ

ಚಾಮರಾಜನಗರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ಭಗೀರಥ ಮಹರ್ಷಿ ಜಯಂತಿ ಆಚರಣೆಯ ಸರಳ ಕಾರ್ಯಕ್ರಮ ಉದ್ಘಾಟಿಸಿ, ಭಗೀರಥರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ಎಲ್ಲ ಸಮುದಾಯಗಳಲ್ಲೂ ಆದರ್ಶ ಪುರುಷರಿದ್ದು ಅವರ ಜಯಂತಿಗಳನ್ನು ಅದೇ ಸಮುದಾಯದವರು ಆಚರಣೆ ಮಾಡುವರು. ಭಗೀರಥ ಮಹರ್ಷಿ ಕಠಿಣ ತಪಸ್ಸು ಆಚರಿಸಿ ಗಂಗೆಯನ್ನು ಧರೆಗೆ ಇಳಿಸಿದ ವಿಚಾರ ರೋಚಕವಾಗಿದೆ. ಉಪ್ಪಾರ ಸಮುದಾಯ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಮಾತನಾಡಿ ರಾಮಾಯಣ, ಮಹಾಭಾರತದಲ್ಲಿ ಮಹರ್ಷಿಗಳ ಉಲ್ಲೇಖವಿದೆ. ಭಗೀರಥ ಮಹರ್ಷಿಗಳು ತಮ್ಮ ಪೂರ್ವಜರ ಮುಕ್ತಿಗಾಗಿ ಗಂಗೆಯನ್ನು ಧರೆಗೆ ಇಳಿಸಿದರು. ಇವರ ಆದರ್ಶಗಳನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು. ಕಠಿಣ ಕೆಲಸಗಳಿಗೆ ಹೆಸರುವಾಸಿಯಾಗಿರುವ ಭಗೀರಥರು ಇಂದಿನ ಯುವಜನತೆಗೆ ಮಾದರಿಯಾಗಿದ್ದಾರೆ ಎಂದರು.

ಶಿಕ್ಷಕರಾದ ಗೋವಿಂದರಾಜು ಮಾತನಾಡಿ ಕ್ರಿ.ಶ.1236ರ ಹೊಯ್ಸಳ ಬಲ್ಲಾಳನ ತಾಮ್ರ ಶಾಸನದಲ್ಲಿ ಉಪ್ಪಾರರ ಬಗ್ಗೆ ಉಲ್ಲೇಖವಿದೆ. ಪಾವಗಡ ಹಾಗೂ ಹೈದರಾಲಿ ಶಾಸನಗಳಲ್ಲೂ ಉಪ್ಪಾರ ಜನಾಂಗದ ಇತಿಹಾಸವನ್ನು ಕಾಣಬಹುದು. ಉಪ್ಪು ತಯಾರಿಕೆ ವೃತ್ತಿಯಲ್ಲಿ ತೊಡಗಿದ್ದ ಉಪ್ಪಾರ ಜನಾಂಗಕ್ಕೆ 1880ರಲ್ಲಿ ಬ್ರಿಟಿಷರು ನಿರ್ಬಂಧ ಹೇರಿ, ತಾವೇ ಉಪ್ಪು ತಯಾರಿಕೆ ಪ್ರಾರಂಭ ಮಾಡಿದ ಪರಿಣಾಮ ಉಪ್ಪಾರರು ಬೇರೆ ಬೇರೆ ವೃತ್ತಿಗಳನ್ನು ಕೈಗೊಂಡರು. ಜನಾಂಗ ಸಂಘಟಿತರಾಗುವ ಜೊತೆಗೆ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಶಾಲೆಯಿಂದ ಹೊರಗುಳಿಯುವುದನ್ನು ತಪ್ಪಿಸಬೇಕು ಹಾಗೂ ಬಾಲ್ಯವಿವಾಹ ಪದ್ಧತಿ ಸಂಪೂರ್ಣವಾಗಿ ತೊಡೆದು ಹಾಕಬೇಕು ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಉಪವಿಭಾಗಾಧಿಕಾರಿ ಶಿವಮೂರ್ತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಎಸ್. ಚಿದಂಬರಂ.ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಎಲ್ಲಾ ಸಮುದಾಯದ ಮುಖಂಡರು, ಹಾಜರಿದ್ದರು

ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ

ಕೊರಟಗೆರೆ :- ಗ್ರಾಮೀಣ ಪ್ರತಿಭೆಗಳನ್ನು ಪ್ರೋತ್ಸಾಹಿಸಿ ಗೌರವಿಸಿ ಸಮಾಜಮುಖಿಗೆ ಅವರನ್ನು ಕರೆತರುವ ಜವಾಬ್ದಾರಿ ಸಂಘ ಸಂಸ್ಥೆಗಳ ಮೇಲಿದೆ ಎಂದು ಪ.ಪಂ. ಸದಸ್ಯ ಕೆ.ಆರ್. ಓಬಳರಾಜು ತಿಳಿಸಿದರು.

ಅವರು ಪಟ್ಟಣದ ತಾಲೂಕು ಕಛೇರಿ ಆವರಣದಲ್ಲಿ ತಾಲೂಕು ಮುಂಜಾನೆ ಗೆಳೆಯರ ಬಳಗ ಹಾಗೂ ಕನ್ನಡ ಪ್ರತಿಷ್ಠಾನ ಟ್ರಸ್ಟ್ ರವರಿಂದ ಹಮ್ಮಿಕೊಂಡಿದ್ದ ಎಸ್.ಎಸ್.ಎಲ್.ಸಿ 2024 ರ ಪರೀಕ್ಷೆಯಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡಿ ಗ್ರಾಮೀಣ ಪ್ರದೇಶಗಳಲ್ಲಿ ಮೂಲ ಭೂತ ಸೌಕರ್ಯಗಳ ಕೊರತೆ ಹಾಗೂ ಕಷ್ಟ ಜೀವನ ದಲ್ಲೂ ಸಹ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಪರೀಕ್ಷೆಗಳಲ್ಲಿ ಅತ್ಯುತಮವಾಗಿ ಸಾಧನೆ ಮಾಡುತ್ತಿದ್ದಾರೆ, ಈ ಬಾರಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತಾಲೂಕಿಗೆ ಅತಿ ಹೆಚ್ಚು ಅಂಕ ಪಡೆದ ಮೂರು ಮಂದಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುತ್ತಿದೆ, ಇದರಿಂದ ಇನ್ನು ಹಲವರಿಗೆ ಸಾಧನೆ ಮಾಡುವ ಛಲ ಹುಟ್ಟುತ್ತದೆ ಎಂದರು.

ಮಾಜಿ ಪ,ಪಂ.ಅಧ್ಯಕ್ಷ ಸದಸ್ಯ ಎ.ಡಿ.ಬಲರಾಮಯ್ಯ ಮಾತನಾಡಿ ಈ ಬಾರಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಗ್ರಾಮೀಣ ಪ್ರದೇಶದ ಮಕ್ಕಳು ಹಾಗೂ ಸರ್ಕಾರಿ ಶಾಲೆಯ ಮಕ್ಕಳ ಸಾಧನೆ ಅದ್ಭುತವಾಗಿದೆ, ಇಡಿ ರಾಜ್ಯಕ್ಕೆ ಉತ್ತರ ಕರ್ನಾಟಕದ ಸರ್ಕಾರಿ ಶಾಲೆಯ ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿ ರಾಜ್ಯಕ್ಕೆ ಪ್ರಥಮ ಬಂದಿರುವುದು ಸಾಧನೆಗೆ ಬಡತನ ಅಡ್ಡಬರುವುದಿಲ್ಲ ಎಂಬುದನ್ನು ತೋರಿಸಿದ್ದಾರೆ. ಅದೇ ರೀತಿಯಾಗಿ ಕೊರಟಗೆರೆ ತಾಲೂಕಿನಲ್ಲಿ ಕೆ.ಪಿ.ಪ್ರೀಯತೋಷ್ 613, ಭೂಮಿಕಾ 609, ಕರಣ್ 605 ಅಂಕಗಳನ್ನು ಪಡೆದಿರುವುದು ಸಾಧನೆ ಯಾಗಿದ್ದು ಮೂರು ಮಕ್ಕಳು ಬಡ ಕುಟುಂಬದಿಂದ ಬಂದಂತಹ ಮಕ್ಕಳಾಗಿದ್ದಾರೆ, ಇಂತಹ ಮಕ್ಕಳನ್ನು ಮುಂಜಾನೆ ಗೆಳೆಯರ ಬಳಗ ಹಾಗೂ ಕನ್ನಡ ಪ್ರತಿಷ್ಠಾನ ಟ್ರಸ್ಟ್ ಗುರುತಿಸಿ ಗೌರವಿಸುತ್ತಿರುವುದು ಸಂಘ ಸಂಸ್ಥೆಗಳ ಜವಾಬ್ದಾರಿ ಸಮಾಜದಲ್ಲಿ ಹೇಗೆ ಇರಬೇಕು ಎಂಬುದನ್ನು ತೋರಿಸುತ್ತದೆ ಎಂದರು.

ಈ ಸಂದರ್ಬದಲ್ಲಿ ತಾಲೂಕಿನಲ್ಲಿ ಎ□□ಎ□□ಎ□□ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು, ಕಾರ್ಯಕ್ರಮದಲ್ಲಿ ಮುಂಜಾನೆ ಗೆಳೆಯರ ಬಳಗದ ಅಧ್ಯಕ್ಷ ಎಲ್.ರಾಜಣ್ಣ, ಕನ್ನಡ ಪ್ರತಿಷ್ಠಾನ ಟ್ರಸ್ಟ್ ಅಧ್ಯಕ್ಷ ಸೊಗಡು ಶ್ರೀನಿವಾಸ್, ಪದಾಧಿಕಾರಿಗಳಾದ ಗಟ್ಲಹಳ್ಳಿ ಕುಮಾರ್, ಪುಟ್ಟಣ್ಣ, ಕೃಷ್ಣಮೂರ್ತಿ, ರಾಮಕೃಷ್ಣ, ಚನ್ನವೀರಯ್ಯ, ಶಿವಕುಮಾರ್, ಮಂಜುನಾಥ್, ಕೆ.ವಿ.ಮಂಜುನಾಥ್, ದಿವ್ಯಪ್ರಸಾದ್, ದೊಡ್ಡಯ್ಯ, ಕೆ.ಬಿ.ಲೋಕೇಶ್, ದಿನೇಶ್, ಪೋಷಕರುಗಳಾದ ಕೆ.ವಿ.ಪುರುಷೋತ್ತಮ್, ವೆಂಕಟೇಶ್, ರಾಜಣ್ಣ ಸೇರಿದಂತೆ ಇನ್ನಿತರರು ಹಾಜರಿದ್ದರು.

ಟೆಕ್ಜಿಯಂಲನ ಏಳನೇ ಆವೃತ್ತಿ ಮುಕ್ತಾಯ

ಬೆಂಗಳೂರು: ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗಾಗಿಯೇ ಆಯೋಜಿಸಲ್ಪಡುವ ಭಾರತದ ಅತಿ ದೊಡ್ಡ ನಾವೀನ್ಯತಾ ವೇದಿಕೆಯಾದ ಟೆಕ್ಜಿಯಂಲನ ಏಳನೇ ಆವೃತ್ತಿಯು ಮುಕ್ತಾಯಗೊಂಡಿದೆ. ಎಲ್ಟಿಟಿಎಸ್ನ ಹೊಸ ಬೆಂಗಳೂರು ಕ್ಯಾಂಪಸ್ನಲ್ಲಿ ನಡೆದ ಈ ವಾರ್ಷಿಕ ತಂತ್ರಜ್ಞಾನ ಸ್ಪರ್ಧೆಗೆ ದೇಶಾದ್ಯಂತ ಇರುವ 503 ಎಂಜಿನಿಯರಿಂಗ್ ಸಂಸ್ಥೆಗಳ 36,765ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹೆಸರು ನೋಂದಾಯಿಸಿಕೊಂಡಿದ್ದರು.

2016 ರಲ್ಲಿ ಪ್ರಾರಂಭವಾದ ಲ್&ಟಿ ಟೆಕ್ನಾಲಜಿ ಸರ್ವೀಸಸ್ (ಎಲ್ ಟಿ ಟಿ ಎಸ್) ಆಯೋಜಿಸುವ ಶೈಕ್ಷಣಿಕ- ಔದ್ಯಮಿಕ ಎಂಜಿನಿಯರಿಂಗ್ ನಾವೀನ್ಯತಾ ಹ್ಯಾಕಥಾನ್ ಆಗಿರುವ ಟೆಕ್ಜಿಯಂಲ ಈಗ ಭಾರಿ ಜನಪ್ರಿಯವಾಗಿದೆ.

ಈ ವರ್ಷದ ಸ್ಪರ್ಧೆಯಲ್ಲಿ ಅಗ್ರ ಸ್ಥಾನ ಪಡೆದ ವಿಜೇತರು ಒಟ್ಟು ರೂ.18 ಲಕ್ಷಕ್ಕಿಂತಲೂ ಹೆಚ್ಚಿನ ನಗದು ಬಹುಮಾನ ಪಡೆದುಕೊಂಡರು. ಭಾರತದ ಅಗ್ನಿ ಕ್ಷಿಪಣಿ ಯೋಜನೆಯಲ್ಲಿ ತಾವು ವಹಿಸಿದ ಪ್ರಮುಖ ಪಾತ್ರಕ್ಕಾಗಿ ಭಾರತದ ಕ್ಷಿಪಣಿ ಮಹಿಳೆ ಎಂದು ಜನಪ್ರಿಯವಾಗಿರುವ ಡಾ. ಟೆಸ್ಸಿ ಥಾಮಸ್ ಅವರು ಈ ಕಾರ್ಯಕ್ರದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಅವರ ಉಪಸ್ಥಿತಿ ಮತ್ತು ಅವರ ಮಾತಿನಲ್ಲಿ ದಕ್ಕಿದ ಒಳನೋಟಗಳಿಂದ ನೆರೆದಿದ್ದ ಪ್ರೇಕ್ಷಕರು ಸ್ಫೂರ್ತಿ ಪಡೆದರು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಡಾ. ಟೆಸ್ಸಿ ಥಾಮಸ್, "ದೇಶಾದ್ಯಂತ ಇರುವ ಎಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳು ಪ್ರಸ್ತುತಪಡಿಸಿದ ತಾಂತ್ರಿಕ ಆವಿಷ್ಕಾರಗಳನ್ನು ನೋಡುವುದೇ ಆನಂದ ದಾಯಕವಾದ ವಿಚಾರವಾಗಿದೆ. ಅಂತಹ ತಂತ್ರಜ್ಞಾನ ಆವಿಷ್ಕಾರಗಳು ಭವಿಷ್ಯಕ್ಕೆ ಹೊಂದುವ ಎಂಜಿನಿಯರಿಂಗ್ ಅಪ್ಲಿಕೇಶನ್ಗಳನ್ನು ರೂಪಿಸುವ ಸಾಮರ್ಥ್ಯವನ್ನು ಹೊಂದಿವೆ. ಎಲ್&ಟಿ ಟೆಕ್ನಾಲಜಿ ಸರ್ವಿಸಸ್ ಈ ಶ್ಲಾಘನೀಯ ಉಪಕ್ರಮವನ್ನು ಯಶಸ್ವಿ ಯಾಗಿ ಮುನ್ನಡೆಸಿದ್ದು, ಕಳೆದ ಏಳು ವರ್ಷ ಗಳಲ್ಲಿ ಯುವ ಮನಸ್ಸುಗಳು ನಾವೀನ್ಯತೆಯ ಅನ್ವೇಷಣೆಯಲ್ಲಿ ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳಲು ಮಾರ್ಗದರ್ಶನ ಮಾಡಿದೆ. ಎರಡು ದಿನಗಳ ಕಾಲ ನಡೆದ ಈ ಹ್ಯಾಕಥಾನ್ ನಲ್ಲಿ ಯುಎವಿಗಳು, ಮೆಡಿಕಲ್ ಡಯಾಗ್ನಾಸ್ಟಿಕ್ಸ್, ರೋಬೋಟಿಕ್ಸ್, ಕಂಪ್ಯೂಟ್ ವಿಷನ್, ಅನಾಲಿಟಿಕ್ಸ್, ಎಲೆಕ್ಟಿಕ್ ವೆಹಿಕಲ್ಸ್ ಮತ್ತು ವೈರ್ಲೆಸ್ ಟ್ರಾನ್ಸ್ ಮಿಷನ್ ಮುಂತಾದ ಚಲನಶೀಲತೆ, ಸುಸ್ಥಿರತೆ ಮತ್ತು ಹೈ-ಟೆಕ್ ವಿಚಾರಗಳನ್ನು ಒಳಗೊಂಡಿರುವ ವಿಷಯಗಳ ಮೇಲೆ ಗಮನ ಕೇಂದ್ರೀಕರಿಸಲಾಗಿತ್ತು. ಸ್ಪರ್ಧೆಯಲ್ಲಿ ಭಾಗವಹಿಸಿದವರಿಗೆ ನೈಜ- ಪ್ರಪಂಚದ ಸಮಸ್ಯೆಗಳಿಗೆ ಸೃಜನಾತ್ಮಕ ಪರಿಹಾರಗಳನ್ನು ಕಂಡುಹಿಡಿಯುವ ಮೂಲಕ ಸಮಸ್ಯೆ ಪರಿಹರಿಸಲು ಪ್ರೇರೇಪಿಸಲಾಯಿತು. ಜೊತೆಗೆ ಅವರಿಗೆ ಟೆಕ್ಜಿಯಂಲ ಇನ್ನೋವೇಟರ್ಸ್ ಎಂಬ ಮನ್ನಣೆ ನೀಡುವ ಮತ್ತು ಎಲ್ ಟಿ ಟಿ ಎಸ್ ನಲ್ಲಿ ಕೆಲಸ ಮಾಡುವ ಅವಕಾಶ ಇರುವುದಾಗಿ ತಿಳಿಸಲಾಯಿತು.

ವಿಶೇಷ ತರಗತಿಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸೂಚನೆ

ಚಾಮರಾಜನಗರ: ಮೊದಲನೇ ಹಂತದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿ 2ನೇ ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳಿಗೆ ಮೇ 15ರಿಂದ ಆರಂಭವಾಗುತ್ತಿರುವ ವಿಶೇಷ ತರಗತಿಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಎರಡನೇ ಹಂತದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಸಿದ್ದತೆಗಳ ಕುರಿತು ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎರಡನೆ ಹಂತದ ಎಸ್.ಎಸ್.ಎಲ್.ಸಿ ಪರೀಕ್ಷೆಯು ಜೂನ್ 7ರಿಂದ 14ರವರೆಗೆ ನಡೆಯಲಿದ್ದು, ಕಡಿಮೆ ಸಮಯವಿರುವುದರಿಂದ ಪರೀಕ್ಷಾ ಕಾರ್ಯಕ್ಕೆ ಅಗತ್ಯವಿರುವ ಸಿದ್ದತಾ ಪ್ರಕ್ರಿಯೆಗಳನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು. ಪರೀಕ್ಷೆ-1ರಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ಪರಿಣಾಮಕಾರಿಯಾಗಿ ನಡೆಸಿ 2ನೇ ಹಂತದ ಪರೀಕ್ಷೆಗೆ ಸಜ್ಜುಗೊಳಿಸಬೇಕು.

ಯಾವುದೇ ಕಾರಣಕ್ಕೂ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು 2ನೇ ಪರೀಕ್ಷೆಯಿಂದ ಹೊರಗುಳಿಯದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು. ಮುಖ್ಯವಾಗಿ ಮಕ್ಕಳಿಗೆ ಪರೀಕ್ಷಾ ಕೌಶಲ್ಯ ಹಾಗೂ ಬರವಣಿಗೆ ಪ್ರಗತಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ತಿಳಿಸಿದರು.

ಮೊದಲನೇ ಹಂತದ ಪರೀಕ್ಷೆಯಲ್ಲಿ ಜಿಲ್ಲೆಯು ಶೇ. 73.85 ಸರಾಸರಿಯೊಂದಿಗೆ ರಾಜ್ಯದಲ್ಲಿ 24ನೇ ಸ್ಥಾನ ಪಡೆದಿದೆ. ಪ್ರಸ್ತುತ 2ನೇ ಪರೀಕ್ಷೆಯಲ್ಲಿ ಇನ್ನೂ ಹೆಚ್ಚಿನ ಫಲಿತಾಂಶ ಬರಲು ಸಂಬಂಧಪಟ್ಟ ಅಧಿಕಾರಿಗಳು ಸಮಯ ವ್ಯರ್ಥ ಮಾಡದೇ ಈಗಿನಿಂದಲೇ ಕಾರ್ಯಪ್ರವೃತ್ತರಾಗಬೇಕು. ಶಾಲೆಗಳ ಪ್ರಾಂಶುಪಾಲರು, ಶಿಕ್ಷಕರು ಮಕ್ಕಳಲ್ಲಿ ಆರೋಗ್ಯಕರ ಸ್ಪರ್ಧಾಗುಣಗಳು ಹಾಗೂ ಆತ್ಮವಿಶ್ವಾಸವನ್ನು ತುಂಬುವ ಮೂಲಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ತರಲು ಪ್ರೇರೇಪಿಸಬೇಕು. ಇದಕ್ಕಾಗಿ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳು ಒಂದು ತಂಡವಾಗಿ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿಯವರು ಸಲಹೆ ಮಾಡಿದರು.

ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ನಡೆಸಲು ಪರೀಕ್ಷಾ ಫಲಿತಾಂಶಕ್ಕೆ ಪೂರಕವಾದ ಕಾರ್ಯಶಿಬಿರಗಳನ್ನು ಹಮ್ಮಿಕೊಳ್ಳಬೇಕು. ಮಕ್ಕಳ ಗಮನವನ್ನು ಕಲಿಕೆಯ ಆಸಕ್ತಿಯೆಡೆಗೆ ಸೆಳೆಯಬೇಕು. ಉತ್ತಮ ಫಲಿತಾಂಶ ಬಂದಿರುವ ವಿವಿಧ ಶಾಲೆಗಳ ಶಿಕ್ಷಕರನ್ನು ವಿಶೇಷ ತರಗತಿ ನಡೆಸಲು ನಿಯೋಜಿಸಬೇಕು. ಶಿಕ್ಷಣ ಇಲಾಖೆಯ ಎಲ್ಲಾ ತಾಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ವಿಶೇಷ ತರಗತಿಗಳು ನಡೆಯುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅಗತ್ಯ ಸಲಹೆಗಳನ್ನು ನೀಡಬೇಕು. ವಿಶೇಷ ತರಗತಿ ಸಮಯದಲ್ಲಿ ಶಾಲೆಗಳಲ್ಲಿ ಬಿಸಿಯೂಟದ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ವಿಶೇಷ ತರಗತಿಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುವುದರ ಜೊತೆಗೆ ಮಕ್ಕಳಿಗೆ ಕಠಿಣವೆನಿಸುವ ವಿಷಯಗಳನ್ನು ಪದೇಪದೇ ತಿಳಿಸಿ ಅರ್ಥ ಮಾಡಿಸಬೇಕು. ಕ್ಲಿಷ್ಟಕರ ವಿಷಯಗಳಿಗೆ ಹೆಚ್ಚಿನ ಗಮನ ಕೇಂದ್ರಿಕರಿಸುವಂತೆ ಮಾಡಬೇಕು ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್ ಅವರು ಮಾತನಾಡಿ ಜಿಲ್ಲೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ವಿಶೇಷ ತರಗತಿ ನಡೆಸಲು ಚಾಮರಾಜನಗರ ತಾಲೂಕಿನ 24, ಗುಂಡ್ಲುಪೇಟೆ 18, ಕೊಳ್ಳೇಗಾಲ 9, ಹನೂರು 19 ಮತ್ತು ಯಳಂದೂರಿನ 4 ಸೇರಿದಂತೆ ಒಟ್ಟು 74 ಶಾಲೆಗಳನ್ನು ಗುರುತಿಸಲಾಗಿದ್ದು, ಇತರೆ ಶಾಲೆಗಳ ಸಮನ್ವಯದೊಂದಿಗೆ ತರಗತಿಗಳು ಸದ್ಯದಲ್ಲಿಯೇ ಪ್ರಾರಂಭವಾಗಲಿವೆ. ಅಲ್ಲದೆ ಪರೀಕ್ಷೆ-1ರಲ್ಲಿ ಶೇ. 50ಕ್ಕಿಂತ ಕಡಿಮೆ ಅಂಕ ಬಂದಿರುವ ವಿದ್ಯಾರ್ಥಿಗಳು ಮತ್ತೊಮ್ಮೆ ಪರೀಕ್ಷೆ ತೆಗೆದುಕೊಳ್ಳಲು ಸಹ ಅವಕಾಶ ಕಲ್ಪಿಸಲಾಗಿದೆ ಎಂದರು ಈ ಬಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 625ಕ್ಕೆ 619 ಅಂಕಗಳಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಗುಂಡ್ಲುಪೇಟೆ ಆದರ್ಶ ಶಾಲೆಯ ವಿದ್ಯಾರ್ಥಿನಿ ರತ್ನಮ್ಮ ಅವರನ್ನು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮೈಸೂರು ಪೇಟ ತೊಡಿಸಿ ಸನ್ಮಾನಿಸಿದರು. ಉನ್ನತ ಹುದ್ದೆ ಪಡೆದು ಜಿಲ್ಲೆಗೆ ಸೇವೆ ನೀಡುವಂತೆ ಹಾರೈಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಉಪವಿಭಾಗಾಧಿಕಾರಿ ಶಿವಮೂರ್ತಿ, ಎಲ್ಲ ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಇತರೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಸ್ಥಳೀಯ

ಇ-ಪೇಪರ್: www.munjaneevartheepaper.com

ಗೋಶಾಲೆಗಳು, ಮೇವು ಬ್ಯಾಂಕ್‌ಗಳ ಸಮರ್ಪಕ ದಾಖಲೀಕರಣಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸೂಚನೆ

ಚಾಮರಾಜನಗರ:ಜಿಲ್ಲೆಯ ವಿವಿಧೆಡೆ ತೆರೆಯಲಾಗಿರುವ ಮೇವು ಬ್ಯಾಂಕ್‌ಗಳು ಹಾಗೂ ಗೋಶಾಲೆಗಳಲ್ಲಿನ ಮೇವಿನ ಲಭ್ಯತೆ, ಪ್ರತಿನಿತ್ಯದ ದಾಸ್ತಾನು, ವಿತರಣೆ ಕಾರ್ಯವೈಖರಿಯನ್ನು ಸಮರ್ಪಕವಾಗಿ ದಾಖಲೀಕರಣ (ಡಾಕುಮೆಂಟೇಶನ್) ಮಾಡುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿ ನಿರ್ವಹಣೆ ಹಿನ್ನೆಲೆಯಲ್ಲಿ ತೆರೆಯಲಾಗಿರುವ ಗೋಶಾಲೆಗಳು ಹಾಗೂ ಮೇವು ಬ್ಯಾಂಕ್‌ಗಳ ನಿರ್ವಹಣೆ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಾಮರಾಜನಗರ ಜಿಲ್ಲೆಯನ್ನು ಸರ್ಕಾರವು ಬರಪೀಡಿತ ಜಿಲ್ಲೆಯಾಗಿ ಘೋಷಿಸಿರುವುದರಿಂದ ಬರ ಪರಿಸ್ಥಿತಿ ನಿರ್ವಹಣೆಗಾಗಿ ಜನ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಮೇವು ಸರಬರಾಜಿನಲ್ಲಿ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಹನೂರು ತಾಲೂಕಿನಲ್ಲಿ ಒಟ್ಟು 17 ಗೋಶಾಲೆಗಳು ಮತ್ತು ಚಾಮರಾಜನಗರ ತಾಲೂಕಿನಲ್ಲಿ 2, ಗುಂಡ್ಲುಪೇಟೆಯಲ್ಲಿ 1 ಮತ್ತು ಹನೂರು ತಾಲೂಕಿನಲ್ಲಿ 4 ಮೇವು ಬ್ಯಾಂಕ್‌ಗಳನ್ನು ತೆರೆಯಲಾಗಿದೆ ಎಂದರು.

ಗೋಶಾಲೆಗಳು ಹಾಗೂ ಮೇವು ಬ್ಯಾಂಕ್‌ಗಳ ಪ್ರತಿನಿತ್ಯದ ವಹಿವಾಟುಗಳನ್ನು ಯಾವುದೇ ಗೊಂದಲಗಳಿಗೆ ಅವಕಾಶವಾಗದಂತೆ ಮೇವಿನ ಲಭ್ಯತೆ, ಪ್ರತಿನಿತ್ಯದ ದಾಸ್ತಾನು, ವಿತರಣೆ ಬಗ್ಗೆ ಮಾಹಿತಿಯನ್ನು ದಾಖಲಿಸುವ ಪ್ರಕ್ರಿಯೆಯನ್ನು ಕಡ್ಡಾಯವಾಗಿ ನಿರ್ವಹಿಸಬೇಕು. ಸರ್ಕಾರದ ಮಾರ್ಗಸೂಚಿಗಳನ್ವಯ ಗೋಶಾಲೆ ತೆರೆಯಲು ಜಾನುವಾರುಗಳಿಗೆ ಕುಡಿಯುವ ನೀರು, ಮೇವು ಹಾಗೂ ನೆರಳಿನ ವ್ಯವಸ್ಥೆಯನ್ನು ಕಲ್ಪಿಸಬೇಕು. ಈ ಸಂಬಂಧ ಚೆಕ್‌ಲಿಸ್ಟ್ ಅನ್ನು ಪಟ್ಟಿ ಮಾಡಿ ಅದರನ್ವಯ ಕಾರ್ಯನಿರ್ವಹಣೆಗೆ ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಬರ ನಿರ್ವಹಣೆ ಸಂಬಂಧ ರೈತರು ತಮ್ಮ ಜಮೀನುಗಳಲ್ಲಿ ಮೇವು ಬೆಳೆಯಲು ಅನುಕೂಲವಾಗುವಂತೆ ಪಶುಪಾಲನಾ ಇಲಾಖೆಯಿಂದ ಮಿನಿ ಮೇವಿನ ಕಿಟ್ (ಬೀಜ) ಗಳನ್ನು ನೀಡಲಾಗುತ್ತದೆ.

ಚಾಮರಾಜನಗರ ತಾಲೂಕಿನ 9388, ಗುಂಡ್ಲುಪೇಟೆಯ 9387, ಕೊಳ್ಳೇಗಾಲ 7435, ಹನೂರು 9966 ಮತ್ತು ಯಳಂದೂರಿನ 1343 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 37519 ರೈತರಿಗೆ ಈಗಾಗಲೇ ಮಿನಿ ಮೇವಿನ ಕಿಟ್‌ಗಳನ್ನು ವಿತರಿಸಲಾಗಿದೆ. ವಿತರಣೆ ಬಳಿಕ ರೈತರು ಮೇವಿನ ಬೀಜ ಬಿತ್ತಿದ್ದಾರೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕು. ಪಶು ಪರಿವೀಕ್ಷಕರು ಈ ಕುರಿತು ಕಡತ ಹಾಗೂ ಛಾಯಾಚಿತ್ರ ದಾಖಲಿಕರಣ ಮಾಡಬೇಕು ಎಂದರು.

ಮೇವು ಬ್ಯಾಂಕ್‌ನಲ್ಲಿ ಮೇವಿನ ಅಗತ್ಯವಿದ್ದರೆ ಅರ್ಜಿ ಸಲ್ಲಿಸಬೇಕು. ಅಧಿಕಾರಿಗಳು ಕ್ಷೇತ್ರಪ್ರವಾಸ ಮಾಡಿ ಪರಿಶೀಲಿಸಬೇಕು. ಮೇವು ವಿತರಣೆಗೆ ಮೊದಲು ಗುಣಮಟ್ಟವನ್ನು ಅಧಿಕಾರಿಗಳು ತಪಾಸಣೆ ಮಾಡಬೇಕು. ಸಾರ್ವಜನಿಕರಿಂದ ಯಾವುದೇ ದೂರುಗಳು ಬರದಂತೆ ಮೇವು ಅಗತ್ಯವಿರುವ ರೈತರಿಗೆ ಮೊದಲ ಆದ್ಯತೆ ಮೇರೆಗೆ ಮೇವು ಒದಗಿಸಬೇಕು. ಹಣಪಾವತಿಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಾಗಬಾರದು ಜಾನುವಾರುಗಳಿಗೆ ಔಷಧ ದಾಸ್ತಾನು ಸಮರ್ಪಕವಾಗಿರಬೇಕು. ಇಲಾಖೆ ಬಗ್ಗೆ ಜನರಿಗೆ ಗೌರವ, ವಿಶ್ವಾಸ ಮೂಡುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಉಪವಿಭಾಗಾಧಿಕಾರಿ ಶಿವಮೂರ್ತಿ,ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ಹನುಮೇಗೌಡ, ಹನೂರು ತಾಲೂಕಿನ ಮುಖ್ಯ ಪಶು ವೈದ್ಯಾಧಿಕಾರಿ ಡಾ. ಸಿದ್ದರಾಜು, ಎಲ್ಲಾ ತಾಲೂಕುಗಳ ತಹಶೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಪಶು ಪರಿವೀಕ್ಷಕರು, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ–ಪೇಪರ್: www.munjaneevartheepaper.com
15 WEDNESDAY MAY 2024
15 ಬುಧವಾರ ಮೇ 2024

ನಾಳೆ ಲೋಯುಕ್ತರಿಂದ ಜನ ಸಂಪರ್ಕ ಸಭೆ

ಬೆಂಗಳೂರು : ಕರ್ನಾಟಕ ಲೋಕಾಯುಕ್ತದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪೊಲೀಸ್ ಅಧೀಕ್ಷಕರಾದ ಪವನ್ ನೆಜ್ಜೂರ್ ರವರ ನೇತೃತ್ವದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಟೌನ್ ಪ್ರವಾಸಿ ಮಂದಿರದಲ್ಲಿ ಮೇ. 15 ರಂದು ಜನ ಸಂಪರ್ಕ ಸಭೆ ಮತ್ತು ಅಹವಾಲು ಸ್ವೀಕಾರ ಸಭೆಯನ್ನು ಏರ್ಪಡಿಸಲಾಗಿರುತ್ತದೆ.

ಸರ್ಕಾರಿ ಕಛೇರಿಗಳಲ್ಲಿ ಕೆಲಸ ಮಾಡಿಕೊಡಲು ವಿಳಂಬ ನಿರ್ಲಕ್ಷ್ಯ ಅಥವಾ ಅಧಿಕಾರ ದುರುಪಯೋಗ/ದುರಾಡಳಿತ ಮಾಡುತ್ತಿದ್ದಲ್ಲಿ ಅಂತಹ ಅಧಿಕಾರಿ, ಸಿಬ್ಬಂದಿಗಳ ಮೇಲೆ ಲಿಖಿತ ಅಹವಾಲುಗಳನ್ನು ಸ್ವೀಕರಿಸಲಿದ್ದೇವೆ. ಸಾರ್ವಜನಿಕರ ದೂರುಗಳಿದ್ದಲ್ಲಿ ಮೇ. 15 ರಂದು ಲಿಖಿತ ದೂರನ್ನು ದ್ವಿಪ್ರತಿಯಲ್ಲಿ ನೀಡಬಹುದಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಲೋಕಾಯುಕ್ತ ಸಂಸ್ಥೆಯ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ

ಬೆಂಗಳೂರು ಪದವೀಧರ ಕ್ಷೇತ್ರ, ಕಾಂಗ್ರೆಸ್ ಅಭ್ಯರ್ಥಿ ರಾಮೋಜಿಗೌಡ ಗೆಲುವು: ರಕ್ಷಾ ರಾಮಯ್ಯ

ಬೆಂಗಳೂರು: ವಿಧಾನಪರಿಷತ್ತಿಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಅಭೂತಪೂರ್ವ ಗೆಲುವು ಸಾಧಿಸಲಿದ್ದಾರೆ ಎಂದು ಯುವ ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯ ಹೇಳಿದ್ದಾರೆ.

ಶಾಂತಿ ನಗರದ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ಬೆಂಗಳೂರು ಪದವೀಧರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಾಮೋಜಿ ಗೌಡ ಅವರು ನಾಮಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಅಭ್ಯರ್ಥಿಯ ಗೆಲುವಿಗೆ ಕಾಂಗ್ರೆಸ್ ಪಕ್ಷದ ಎಲ್ಲಾ ಕಾರ್ಯಕರ್ತರು ಮತ್ತು ನಾಯಕರು ಅವಿರತವಾಗಿ ಶ್ರಮಿಸುತ್ತೇವೆ. ಅತ್ಯಧಿಕ ಮತಗಳ ಅಂತರದಿಂದ ನಾವು ನಮ್ಮ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳುತ್ತೇವೆ ಎಂದರು. ಕಾಂಗ್ರೆಸ್ ಸರ್ಕಾರದ ಜನಪರ ಕಾರ್ಯಕ್ರಮಗಳು ನಮಗೆ ಶ್ರೀರಕ್ಷೆಯಾಗಿವೆ. ಇವು ಮುಂಬರುವ ದಿನಗಳಲ್ಲಿ ನಮ್ಮ ಪಕ್ಷಕ್ಕೆ ಇನ್ನಷ್ಟು ಶಕ್ತಿ ತುಂಬಲಿವೆ ಎಂದು ರಕ್ಷಾ ರಾಮಯ್ಯ ಹೇಳಿದರು.

ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸಲು ಸೂಚನೆ

ತುಮಕೂರು: ವಿದ್ಯುತ್ ಸಮಸ್ಯೆಗೆ ಸಂಬಂಧಿಸಿದಂತೆ ಗ್ರಾಮೀಣ ಭಾಗದಿಂದ ರೈತರು ಸೇರಿದಂತೆ ಯಾರೇ ಕರೆ ಮಾಡಿದರೂ ಬೆಸ್ಕಾಂ ಅಧಿಕಾರಿಗಳು ಮತ್ತು ಸಿಬ್ಬಂದಿ ತಕ್ಷಣವೇ ಕರೆ ಸ್ವೀಕರಿಸಿ ಸಮಸ್ಯೆಗಳನ್ನು ಬಗೆಹರಿಸಬೇಕು ಮತ್ತು 1912 ಹೆಲ್ಪ್‌ಲೈನ್‌ಗೆ ದಾಖಲಾಗುವ ದೂರವಾಣಿ ಕರೆಗಳು ಮತ್ತು ಕರೆಗಳಿಗೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕ್ರಮಗಳ ಕುರಿತು ತಮಗೆ ಪ್ರತಿ ದಿನ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಬೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ವಿಡಿಯೋ ಕಾನ್ಫರೆನ್ಸ್ ಸಭೆಯ ಅಧ್ಯಕ್ಷತೆವಹಿಸಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ಎಲ್ಲಿಯೂ ಸಹ ಅಂಡರ್‌ಪಾಸ್‌ಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಮತ್ತು ತಕ್ಷಣವೇ ಪಂಪ್ ಮಾಡುವ ಮೂಲಕ ನೀರನ್ನು ಹೊರತೆಗೆಯಬೇಕು. ಮಳೆ ಅನಾಹುತದಿಂದ ಯಾವುದೇ ಅವಘಡವಾಗದಂತೆ ಎಲ್ಲಾ ನಿಟ್ಟಿನಲ್ಲೂ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಬುಗುಡನಹಳ್ಳಿ ಕೆರೆಯ ಸುತ್ತಮುತ್ತ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಕೆರೆಯ ಪಾತ್ರದ ರೈತರು ಯಾವುದೇ ಕಾರಣಕ್ಕೂ ಬುಗುಡನಹಳ್ಳಿ ಕೆರೆ ನೀರನ್ನು ಕೃಷಿ ಚಟುವಟಿಕೆಗಳಿಗೆ ಬಳಸಬಾರದು. ಬಳಸಿದಲ್ಲಿ ದಂಡ ವಿಧಿಸಲಾಗುವುದು ಎಂದು ಸಾರ್ವಜನಿಕರಲ್ಲಿ ಎಚ್ಚರಿಕೆ ಮೂಡಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಹೊಸದಾಗಿ ಕೊರೆಯಲಾದ 139 ಕೊಳವೆ ಬಾವಿಗಳ ಪೈಕಿ 125 ಕೊಳವೆ ಬಾವಿಗಳಿಗೆ ಈಗಾಗಲೇ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದ್ದು, ಇನ್ನುಳಿದ 14 ಬೋರ್‌ವೆಲ್‌ಗಳಿಗೆ ತಕ್ಷಣವೇ ವಿದ್ಯುದ್ದೀಕರಣಗೊಳಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

ಇತ್ತೀಚೆಗೆ ಸುರಿದ ಮಳೆಯಿಂದಾಗಿ ಕುಣಿಗಲ್‌ನಲ್ಲಿ ಒಂದು ರಾಸು ಹಾಗೂ ಚಿಕ್ಕನಾಯಕನಹಳ್ಳಿಯಲ್ಲಿ 2 ರಾಸುಗಳು ಮೃತಪಟ್ಟಿದ್ದು, ತ್ವರಿತಗತಿಯಲ್ಲಿ ಪರಿಹಾರ ಪಾವತಿಯಾಗಬೇಕು. ತಹಶೀಲ್ದಾರ್ ಮತ್ತು ಇಓಗಳು ಖುದ್ದಾಗಿ ಸಂತ್ರಸ್ತರ ಮನೆಗಳಿಗೆ ತೆರಳಿ ಚೆಕ್ ವಿತರಿಸಬೇಕು. ಅಂತೆಯೇ ಬೆಳೆ ಹಾನಿ ಬಗ್ಗೆ ವರದಿಯಾದಲ್ಲಿ ಕಂದಾಯ, ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಜಂಟಿ ಸಭೆ ನಡೆಸಿ ವರದಿ ನೀಡಬೇಕು. ನಿಯಮಾನುಸಾರ ಪರಿಹಾರಕ್ಕೆ ಕ್ರಮವಹಿಸಬೇಕು. ಯಾವುದೇ ಕಾರಣಕ್ಕೂ ವಿಳಂಬ ನೀತಿ ಧೋರಣೆಯನ್ನು ಸಹಿಸುವುದಿಲ್ಲವೆಂದು ಎಚ್ಚರಿಕೆ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿರುವ 700 ಕೊಳವೆ ಬಾವಿಗಳಲ್ಲಿ ಪ್ರಸ್ತುತ ನೀರಿನ ಇಳುವರಿ ಕುರಿತು ತಮಗೆ ಸಮಗ್ರ ವರದಿ ಸಲ್ಲಿಸಬೇಕು. ಪ್ರತಿಯೊಂದು ಕೊಳವೆ ಬಾವಿಗೆ ಆರ್‌ಆರ್ ಸಂಖ್ಯೆ ಲಿಂಕ್ ಆಗಿರುವಂತೆ ನೋಡಿಕೊಳ್ಳಬೇಕು. ಇದಕ್ಕೆ ಸಂಬಂಧಿಸಿದಂತೆ ಪಾಲಿಕೆ ಮತ್ತು ಬೆಸ್ಕಾಂ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸುವಂತೆ ಅವರು ಸೂಚಿಸಿದರು.

ಖಾಸಗಿ ಬೋರ್‌ವೆಲ್‌ಗಳ ರೈತರೊಂದಿಗೆ ಮಾಡಿಕೊಂಡ ಒಡಂಬಡಿಕೆಯಂತೆ ಬಾಡಿಗೆಯನ್ನು ಪ್ರತಿ ತಿಂಗಳು ಪಾವತಿ ಮಾಡಬೇಕು. ವಿಳಂಬ ಧೋರಣೆ ಅನುಸರಿಸಬಾರದು. ಜಿಲ್ಲೆಯಾದ್ಯಂತ ಒಟ್ಟು 85 ಖಾಸಗಿ ಕೊಳವೆಬಾವಿಗಳಿದ್ದು, ಈ ಖಾಸಗಿ ಕೊಳವೆ ಮಾಲೀಕರ ಹೆಸರು ಮತ್ತು ಮೊಬೈಲ್ ಸಂಖ್ಯೆಯನ್ನು ಜಿಲ್ಲಾ ಪಂಚಾಯತಿಗೆ ಕಳುಹಿಸಿಕೊಡುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಸೂಚಿಸಿದರು.



ಬೆಂಗಳೂರು ನಗರ ಪದವೀಧರ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ರಾಮೋಜಿಗೌಡ ಅವರ ನಾಮಪತ್ರ ಸಲ್ಲಿಕೆಗೂ ಮುನ್ನಾ ಬೃಹತ್ ಕಾರ್ಯಕರ್ತರೊಂದಿಗೆ ಮೆರವಣಿಗೆಯ ಮೂಲಕ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್.ಮುನಿಯಪ್ಪ ನವರು ತೆರಳಿದರು. ಈ ವೇಳೆ ಅಭ್ಯರ್ಥಿ ರಾಮೋಜಿ ಗೌಡ, ಸಂಸದರಾದ ಡಿ.ಕೆ.ಸುರೇಶ್, ಸೌಮ್ಯ ರೆಡ್ಡಿ, ಉಮಾಪತಿ ಗೌಡ ಸ್ಥಳೀಯ ಕಾಂಗ್ರೆಸ್ ನಾಯಕರು ಉಪಸ್ಥಿತರಿದ್ದರು.

ಹೆಚ್ ಎಸ್ ಆರ್ ಪಿ ನಂಬರ್ ಅಳವಡಿಸಿಕೊಳ್ಳದಿದ್ದರೆ ದಂಡ ಗ್ಯಾರಂಟಿ

ಬೆಂಗಳೂರು: ವಾಹನಗಳನ್ನು ಹೊಂದಿರುವ ವಾಹನ ಸವಾರರು, ಮಾಲೀಕರು ತಮ್ಮ ವಾಹನಗಳಿಗೆ ಹೆಚ್ ಎಸ್ ಆರ್ ಪಿ ನಂಬರು ಅಳವಡಿಸಿಕೊಳ್ಳದಿದ್ದರೆ ಜೂನ್ 1 ರಿಂದ ನಿಮಗೆ ದಂಡ ಬೀಳುವುದು ಗ್ಯಾರಂಟಿ. ರಾಜ್ಯ ಸರ್ಕಾರ ವಾಹನಗಳ ಅಂಕಿ ಸಂಖ್ಯೆಗಳನ್ನು ಕ್ರೋಢೀಕರಿಸಿ ಸುರಕ್ಷತಾ ದೃಷ್ಟಿಯಿಂದ ಹೆಚ್‌ಎಸ್‌ಆರ್‌ಪಿ ನಂಬರುಗಳನ್ನು ಅಳವಡಿಸಿಕೊಳ್ಳಲು ಈಗಾಗಲೇ 3 ಬಾರಿ ಅಧಿಕೃತ ಮಾಹಿತಿ ಒದಗಿಸಿತ್ತು. ಇದಕ್ಕಾಗಿ ಗಡುವು ಕೂಡ ನೀಡಿತ್ತು.

ಸರ್ಕಾರದ ಈ ಕ್ರಮವನ್ನು ಧಿಕ್ಕರಿಸಿರುವ ವಾಹನ ಸವಾರರು ಅದ್ಯಾಕೋ ತಮ್ಮ ವಾಹನಗಳಿಗೆ ಇದುವರೆಗೂ ಹೆಚ್ ಎಸ್ ಆರ್ ಪಿ ನಂಬರು ಅಳವಡಿಕೊಳ್ಳಲು ಮುಂದೆ ಬಂದಿಲ್ಲ. ಸರ್ಕಾರ ನೀಡಿದ್ದ ಗಡುವು ಇದೇ ಮೇ 31 ಕ್ಕೆ ಕೊನೆಗೊಳ್ಳಲಿದೆ. ಅಷ್ಟರೊಳಗೆ ವಾಹನ ಸವಾರರು ಮತ್ತು ಮಾಲೀಕರು ತಮ್ಮ ವಾಹನಗಳಿಗೆ ಹೆಚ್ ಎಸ್ ಆರ್ ಪಿ ನಂಬರು ಅಳವಡಿಸಿಕೊಳ್ಳಬೇಕು. ಇಲ್ಲದಿದ್ದರೆ ನಿಮಗೆ ದಂಡ ಬೀಳುವುದು ಖಚಿತ. ಹೆಚ್‌ಎಸ್‌ಆರ್‌ಪಿ ನಂಬರು ಅಳವಡಿಸಿಕೊಳ್ಳದ ವಾಹನ ಸವಾರರು ಅಥವಾ ಮಾಲೀಕರು ತಮ್ಮ ವಾಹನದೊಂದಿಗೆ ಪೊಲೀಸರ ಕೈಯಲ್ಲಿ ಸಿಕ್ಕಿ ಬಿದ್ದರೆ ಮೊದಲ ಬಾರಿಗೆ ನಿಮಗೆ ರೂ.500 ದಂಡ ಬೀಳುತ್ತದೆ. ಎರಡನೆ ಬಾರಿಗೆ ಸಿಕ್ಕಿ ಬಿದ್ದರೆ ರೂ.1 ಸಾವಿರ ದಂಡ ಬೀಳುವುದು ಗ್ಯಾರಂಟಿ. ಒಂದುವೇಳೆ ಆಗಲೂ ನೀವು ಹೆಚ್ ಎಸ್ ಆರ್ ಪಿ ನಂಬರು ಅಳವಡಿಸಕೊಳ್ಳದೇ ಹೋದರೆ ಮುಂದೆ ಇದೆ ನಿಮಗೆ ಮಾರಿ ಹಬ್ಬ.

ಉಡುಪಿ ಶ್ರೀ ಕೃಷ್ಣನಿಗೆ ಅನಂತೇಶ ಅಲಂಕಾರ

ಉಡುಪಿ: ಶ್ರೀ ಪುತ್ತಿಗೆ ವಿಶ್ವ ಗೀತಾ ಪರ್ಯಾಯ ಉಡುಪಿ ಶ್ರೀ ಕೃಷ್ಣ ಮಂದಿರದಲ್ಲಿ ಇಂದು ವೈಶಾಖ ಶುಕ್ಲ ಷಷ್ಠಿ ಸೋಮವಾರದಂದು ಅನಂತೇಶ ಅಲಂಕಾರ ಮಾಡಲಾಗಿದ್ದು, ಭಕ್ತರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿತ್ತು.

ಕ್ರೋಧಿ ನಾಮ ಸಂವತ್ಸರ, ವಸಂತ ಋತುವಿನ ಮೇಷಾರ್ಕ ಇದ್ದುದರಿಂದ ಇಂದು ಶ್ರೀ ಕೃಷ್ಣನಿಗೆ ಅನಂತೇಶ ಅಲಂಕಾರ ಸೇವೆ ಮಾಡಲಾಗಿದ್ದು ಭಕ್ತ ವೃಂದ ಕೃಷ್ಣನ ದರ್ಶನ ಪಡೆದು ಪುನೀತರಾದರು. ಶ್ರೀಮದಾನಂದ ತೀರ್ಥರು, ಶ್ರೀ ಭಾವೀ ಸಮೀರ ಶ್ರೀ ವಾದಿರಾಜ ಗುರುಗಳು ಮತ್ತು ತೀರ್ಥರಾಜರೆಲ್ಲರ ಸಂಕಲ್ಪದಂತೆ ಇಂದು ಅನಂತೇಶ ಅಲಂಕಾರದಲ್ಲಿ ಶ್ರೀಕೃಷ್ಣನು ಕಂಗೊಳಿಸುತ್ತಿರುವುದು ಕಂಡು ಬಂದಿತು.

ವಿಧಾನ ಪರಿಷತ್ ಚುನಾವಣೆ– ಬಲಗೈ ತೋರು ಬೆರಳಿಗೆ ಶಾಯಿ

ಬೆಂಗಳೂರು: ಬೆಂಗಳೂರು ಪದವೀಧರರ ಕ್ಷೇತ್ರ ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆ–2024ರ ಹಿನ್ನೆಲೆಯಲ್ಲಿ ಜೂ.3ರಂದು ರಂದು ನಡೆಯಲಿರುವ ಮತದಾನದ ದಿನದಂದು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬೆಂಗಳೂರು ಪದವೀಧರರ ಕ್ಷೇತ್ರ ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಮತದಾರರ ಬಲಗೈನ ತೋರು ಬೆರಳಿಗೆ ಅಳಿಸಲಾಗದ ಶಾಯಿಯನ್ನು ಹಚ್ಚಲಾಗುವುದು ಎಂದು ಬೆಂಗಳೂರು ಪದವೀಧರರ ಕ್ಷೇತ್ರ ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರು ತಿಳಿಸಿದ್ದಾರೆ.

ರೈತರಿಗೆ ಇತ್ತೀಚಿನ ಮಳೆ ಸಂತಸ ತಂದಿಲ್ಲ

ಹುಣಸೂರು: ವಾಣಿಜ್ಯ ಬೆಳೆ ತಂಬಾಕು ಬೇಸಾಯಕ್ಕೆ ಭೂಮಿ ಹದಗೊಳಿಸಿ ಆಕಾಶದತ್ತ ನೋಡುತ್ತಿರುವ ರೈತರಿಗೆ ಇತ್ತೀಚಿನ ಮಳೆ ಸಂತಸ ತಂದಿಲ್ಲ. ರೈತರು ಹೆಚ್ಚಿ ಮಳೆಯ ನಿರೀಕ್ಷೆಯಲ್ಲೇ ಇದ್ದಾರೆ. ಏಪ್ರಿಲ್ ಮತ್ತು ಮೇ ಮೊದಲ ವಾರದಲ್ಲಿ ಮಳೆ ನಿರೀಕ್ಷೆಯಲ್ಲಿಯೇ ಸಸಿ ಮಡಿಗಳನ್ನು ಬೆಳೆಸಿದ್ದು, ಪೋಷಣೆಗೆ ಹರಸಾಹಸ ಮಾಡುವಂತಾಗಿದೆ. ಕೊಳವೆ ಬಾವಿಯುಳ್ಳವರು ಅಲ್ಲಲ್ಲಿ ನಾಟಿ ಪ್ರಕ್ರಿಯೆ ಮುಗಿಸಿ ನಿರಾಸೆಗೊಂಡಿದ್ದಾರೆ.

ಹಳೆ ಮೈಸೂರು ಭಾಗದ ಪ್ರಮುಖ ವಾಣಿಜ್ಯ ಬೆಳೆ ವರ್ಜಿನಿಯ ತಂಬಾಕಿಗೆ ವಿಶ್ವದಾದ್ಯಂತ ಬಹು ಬೇಡಿಕೆ ಇದೆ. ಕಳೆದ ಸಾಲಿನಲ್ಲಿ ಇಳುವರಿ ಕುಸಿತದ ನಡುವೆ ಬಂಪರ್ ದರ ಸಿಕ್ಕಿದ್ದು, ಈ ಸಾಲಿನಲ್ಲಿ ಹೆಚ್ಚುವರಿ ಪ್ರದೇಶದಲ್ಲಿ ತಂಬಾಕು ಬೆಳೆಯಲು ಉತ್ಸುಕರಾಗಿದ್ದಾರೆ.

'2024–25ನೇ ಸಾಲಿನಲ್ಲಿ ಅತಂತ್ರ ವಾತಾವರಣದ ನಡುವೆಯೇ ಬೆಳೆಗಾರರು ತಂಬಾಕು ಬೆಳೆಯುತ್ತಿದ್ದಾರೆ. ಮೂರು ವರ್ಷದ ಇಳುವರಿ ಸರಾಸರಿ ಗಮನದಲ್ಲಿಟ್ಟು ಈ ಸಾಲಿಗೆ ಮಂಡಳಿ ಸಿಂಗಲ್ ಬ್ಯಾರನ್ ಪರವಾನಗಿ ಹೊಂದಿರುವ ರೈತರಿಗೆ ಹೆಚ್ಚುವರಿ 1ಎಕರೆ 25 ಗುಂಟೆ ಸೇರಿದಂತೆ ಒಟ್ಟು 4.25 ಎಕರೆಯಲ್ಲಿ 1,806 ಕೆ.ಜಿ ಬೆಳೆಯಲು ಅವಕಾಶ ನೀಡಿದೆ' ಎಂದು ಮಂಡಳಿ ಪ್ರಾದೇಶಿಕ ಕಚೇರಿ ಅಧಿಕಾರಿ ಜೆ.ಬುಲ್ಲು ಸುಬ್ಬರಾವ್ ತಿಳಿಸಿದರು.

ಅಂತರರಾಷ್ಟ್ರೀಯ ಮಟ್ಟದಲ್ಲಿ ಕುಸಿತ: 'ಇಂಡೋನೇಷ್ಯಾ, ಬ್ರೆಜಿಲ್, ಆಫ್ರಿಕಾ, ಜಿಂಬಾಬ್ವೆ ದೇಶಗಳಲ್ಲಿ ಕಳೆದ ಸಾಲಿನಲ್ಲಿ ಪ್ರಕೃತಿ ವೈಫಲ್ಯದಿಂದ ಬೆಳೆ ಸಂಪೂರ್ಣ ನೆಲಕಚ್ಚಿತ್ತು. ಚೀನಾ ಕಳೆದ ಸಾಲಿನಿಂದ ತಂಬಾಕು ರಫ್ತು ಸ್ಥಗಿತಗೊಳಿಸಿದ್ದು, 10 ಕೋಟಿ ಕೆ.ಜಿ ತಂಬಾಕು ಕೊರತೆ ಎದುರಾಗಿದೆ. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೇಡಿಕೆಗೆ ತಕ್ಕಷ್ಟು ತಂಬಾಕು ಇಲ್ಲ. ಈ ಮಧ್ಯೆ ತಂಬಾಕು ಮಂಡಳಿ ಹೆಚ್ಚುವರಿ ಕೆ.ಜಿ ನಿಗದಿಗೊಳಿಸಿದ್ದು, ರಾಜ್ಯದಲ್ಲಿ 70ರಿಂದ 72 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯುವ ನಿರೀಕ್ಷೆ ಇದೆ' ಎಂದು ಐಟಿಸಿ ಲೀಫ್ ವ್ಯವಸ್ಥಾಪಕ ಅಧಿಕಾರಿ ಶ್ರೀನಿವಾಸ್ ರೆಡ್ಡಿ ತಿಳಿಸಿದರು.

'ಕಳೆದ ಸಾಲಿನಲ್ಲಿ ತಂಬಾಕು ಕೈ ಹಿಡಿದು ಲಾಭ ಸಿಕ್ಕಿದೆ. ಈ ಸಾಲಿನಲ್ಲಿ ಮಂಡಳಿ 4.25 ಎಕರೆಯಲ್ಲಿ ಬೆಳೆಯಲು ಅವಕಾಶ ಕಲ್ಪಿಸಿ ಹೆಚ್ಚುವರಿ ರಸಗೊಬ್ಬರ ನೀಡಿರುವುದು ಬೆಳೆಗಾರರಿಗೆ ಅನುಕೂಲವಾಗಿದೆ. ಈಗಾಗಲೇ ಭೂಮಿ ಹದಗೊಳಿಸಿ ಸಸಿ ನಾಟಿಗೆ ಮಳೆ ನಿರೀಕ್ಷೆಯಲ್ಲಿದ್ದೇವೆ ಹುಣಸೂರು ತಾಲ್ಲೂಕಿನ ತಟ್ಟೆಕೆರೆಯಲ್ಲಿ ಬಿಸಿಲ ಝಳದಲ್ಲೇ ತಂಬಾಕು ಸಸಿ ನಾಟಿ ಮಾಡುತ್ತಿರುವ ಮಹಿಳೆಯರುಸಸಿ ಮಡಿಗಳ ಪೋಷಣೆಗೆ ಬೆಳೆಗಾರರ ಹರಸಾಹಸ ಹೆಚ್ಚುವರಿ ಪ್ರದೇಶದಲ್ಲಿ ತಂಬಾಕು ಬೆಳೆಯಲು ಉತ್ಸುಕ ರಾಜ್ಯದಲ್ಲಿ 70ರಿಂದ 72 ಸಾವಿರ ಹೆಕ್ಟೇರ್ ಪ್ರದೇಶ ನಿರೀಕ್ಷೆ

ಭೂಮಿ ತಾಪಕ್ಕೆ ಸಸಿ ದಿಂಡು ಕೊಳೆಯುವ ಭೀತಿ 'ತಂಬಾಕು ಬೆಳೆಗಾರರು ಮಳೆ ಬೀಳುವವರೆಗೆ ಸಸಿಗಳನ್ನು ಉಳಿಸಿಕೊಳ್ಳಬೇಕಿದೆ. ಬಿಸಿಲಿನ ನಡುವೆ ಬರುವ ಮಳೆಗೆ ಸಸಿ ನಾಟಿ ಮಾಡುವುದರಿಂದ ಭೂಮಿ ತಾಪಕ್ಕೆ ಸಸಿ ದಿಂಡು ಕರಗಿ ಕೊಳೆಯಬಹುದು' ಎಂದು ಕೇಂದ್ರೀಯ ತಂಬಾಕು ಸಂಶೋಧನಾ ಕೇಂದ್ರದ ಹಿರಿಯ ವಿಜ್ಞಾನಿ ಡಾ.ರಾಮಕೃಷ್ಣನ್ ಹೇಳಿದರು. ಈ ಸಂದರ್ಭದಲ್ಲಿ ಗ್ಲೋ ಇಟ್ 8 ಮಿಲಿ ಅಥವಾ ಕೋಸೈಡ್ 20 ಗ್ರಾಂ ಪುಡಿಯನ್ನು 15 ಲೀಟರ್ ನೀರಿಗೆ ಮಿಶ್ರಣ ಮಾಡಿ ಸಿಂಪಡಿಸಿದಲ್ಲಿ ದಿಂಡು ಕೊಳೆಯುವಿಕೆ ನಿಯಂತ್ರಿಸಬಹುದು. ಕರಿಕಡ್ಡಿ ಅಥವಾ ಸೊರಗು ರೋಗ ಕಂಡುಬಂದಲ್ಲಿ ರೆಡೋಮಿಲ್ ಗೋಲ್ಡ್ ಅಥವಾ ಮೆಟ್ಕೋ 10 ಗ್ರಾಂ ಔಷಧವನ್ನು 10 ಲೀ ನೀರಿಗೆ ಬೆರೆಸಿ ಸಿಂಪಡಿಸಲು ಸಲಹೆ ನೀಡಿದ್ದಾರೆ.

ಕೋದಂಡರಾಮ ದೇಗುಲದಲ್ಲಿ ವಿಶೇಷ ಪೂಜೆ

ಕನಕಪುರ: ನಗರದ ಕೋಟೆ ಹೆಬ್ಬಾಗಿಲಿನಲ್ಲಿರುವ ಶ್ರೀ ಕೋದಂಡರಾಮ ದೇವಾಲಯದಲ್ಲಿ ಶ್ರೀ ರಾಮಾನುಜಾಚಾರ್ಯರ ಜಯಂತಿ ಪ್ರಯುಕ್ತ ಬೆಳಗ್ಗೆಯಿಂದಲೇ ವಿಶೇಷ ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಆಚರಣೆಗಳನ್ನು ನೆರವೇರಿಸಲಾಯಿತು.

ದೇವಾಲಯದ ಅಂಗಳದಲ್ಲಿ ಶ್ರೀ ರಾಮಾನುಜಾಚಾರ್ಯರ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿವಿಧ ಹೂವುಗಳಿಂದ ಅಲಂಕರಿಸಿ ಪೂಜಿಸ ಲಾಯಿತು. ಮಹಿಳಾ ಭಜನಾ ಮಂಡಳಿ ಸದಸ್ಯರು ಶ್ರೀಗಳ ಭಕ್ತಿ ಕೀರ್ತನೆಗಳನ್ನು ಹಾಡಿ ಭಕ್ತಿ ಪ್ರದರ್ಶಿ ಸಿದರು. ಹಿಂದೂ ಧರ್ಮದ ಶ್ರೇಷ್ಠ ತತ್ವಜ್ಞಾನಿಗಳಲ್ಲಿ ಒಬ್ಬರಾಗಿದ್ದ ಶ್ರೀಗಳು, ಸಮಾಜದಲ್ಲಿದ್ದ ಅಸ್ಪೃಶ್ಯತೆಯನ್ನು ತೊಡೆದು ಹಾಕಲು ಶ್ರಮಿಸಿದ ಮಹಾಮಹಿಮರು.

11ನೇ ಶತಮಾನದ 1017ರಲ್ಲಿ ತಮಿಳುನಾಡಿನ ಶ್ರೀ ಪೆರಂಬುದೂರಿನಲ್ಲಿ ತಮಿಳು ಬ್ರಾಹ್ಮಣ ಕುಟುಂಬದಲ್ಲಿ ಜನಿಸಿದ ಇವರು, ವಿಶಿಷ್ಟಾದ್ವೈತ ಸಿದ್ಧಾಂತ ಸಾರಿದ ಮಹಾ ಗುರುವಾಗಿ, ತತ್ವಜ್ಞಾನಿ ಯಾಗಿ ಬಾಳಿ ಬದುಕಿದರು. ಉತ್ತರ ಮತ್ತು ದಕ್ಷಿಣ ಭಾರತದ ವೈಷ್ಣವ ಪಂಥವನ್ನು ಒಗ್ಗೂಡಿಸಿ ವಿಷ್ಣುವಿನ ಆರಾಧನೆ ಮತ್ತು ಧಾರ್ಮಿಕ ನಂಬಿಕೆ ಗಳನ್ನು ಬಲಗೊಳಿಸಿದರು. ತಮ್ಮ ಸುದೀರ್ಘ 120 ವರ್ಷಗಳ ಜೀವನದಲ್ಲಿ ವಿಷ್ಣುವನ್ನು ಪೂಜಿಸುವುದು ಮೋಕ್ಷ ಪಡೆಯಲು ಇರುವ ಏಕೈಕ ಮಾರ್ಗವಾಗಿದೆ.

ರಾಮಾನುಜಾಚಾರ್ಯರು 12 ಕರ್ನಾಟಕದ ಮೇಲುಕೋಟೆಯಲ್ಲಿ ನೆಲೆಸಿ ಅಲ್ಲಿ ಅವರು ತಮ್ಮ ವಿಶಿಷ್ಟಾದೊತ ಸಿದ್ಧಾಂತ ಪ್ರಚಾರ ಮಾಡಿದರು. ಇಂದಿಗೂ ಮೇಲುಕೋಟೆ ವೈಷ್ಣವ ಸಂಪ್ರದಾಯದ ಕೇಂದ್ರವಾಗಿದೆ.

11ನೇ ಶತಮಾನದ ಮಹಾ ಸಂತ ರಾಮಾನುಜಾ ಚಾರ್ಯರ 216 ಅಡಿ ಎತ್ತರದ ಪ್ರತಿಮೆ ಹೈದರಾಬಾದ್ ಮುಚಿಂತಲ್‌ನಲ್ಲಿ ಪ್ರತಿಷ್ಠಾಪಿಸಲಾಗಿದೆ.

ಮರ್ಸಿಡಿಸ್ ಬೆಂಝ್ ಇಂಡಿಯಾ ಮತ್ತು ಎಕ್ಸಾನ್ ಮೊಬಿಲ್ ಇಂಡಿಯಾ – 30 ವರ್ಷಗಳ ಗಮನಾರ್ಹ ಪಾಲುದಾರಿಕೆ

ಬೆಂಗಳೂರು, 14 ಮೇ 2024: ಸಿಂಥೆಟಿಕ್ ಮೋಟಾರ್ ಆಯಿಲ್ ನ ಜಾಗತಿಕ ನಾಯಕನಾಗಿರುವ ಎಕ್ಸಾನ್ ಮೊಬಿಲ್ ಇತ್ತೀಚೆಗೆ ಮರ್ಸಿಡಿಸ್ ಬೆಂಝ್ ಇಂಡಿಯಾ □□□□□□ ದೊಂದಿಗಿನ 30 ವರ್ಷಗಳ ಯಶಸ್ವಿ ಪಾಲುದಾರಿಕೆಯನ್ನು ಸ್ಮರಿಸಿಕೊಂಡಿದೆ. ಪುಣೆಯ ಚಕನ್ ನಲ್ಲಿರುವ ಮರ್ಸಿಡಿಸ್ ಬೆಂಝ್ ಇಂಡಿಯಾ ಘಟಕದಲ್ಲಿ ನಡೆದ ಈ ಮೈಲಿಗಲ್ಲು ಕಾರ್ಯಕ್ರಮ ಇಬ್ಬರು ಪ್ರವರ್ತಕರ ನಡುವಿನ ನಿರಂತರ ಸಹಯೋಗ ಮತ್ತು ಈ ವಲಯದಲ್ಲಿ ನಾವೀನ್ಯತೆ ಮತ್ತು ಪರಸ್ಪರ ಬೆಳವಣಿಗೆಯನ್ನು ಹೆಚ್ಚಿಸುವ ಬದ್ಧತೆಗೆ ನಿದರ್ಶನವಾಗಿದೆ.

ಎ–ಕ್ಲಾಸ್ ಲಿಮೋಸಿನ್, ಮರ್ಸಿಡಿಸ್ ಮೇಬ್ಯಾಕ್ ಎಸ್ 580 ಲಿಮೋಸಿನ್ಸ್ ಮತ್ತು ಜಿಎಲ್ ಇ ಮತ್ತು ಜಿಎಲ್ ಎಸ್ ನಂತಹ ಎಸ್ ಯುವಿಗಳನ್ನು ಒಳಗೊಂಡಿರುವ ಭಾರತದಲ್ಲಿ ಬೆಳೆಯುತ್ತಿರುವ ಐಷಾರಾಮಿ ಪೋರ್ಟ್ ಪೋಲಿಯೊ ವಿಕಸನದ ಅಗತ್ಯಗಳನ್ನು ಪೂರೈಸಲು ಎಕ್ಸಾನ್ ಮೊಬಿಲ್ ಮರ್ಸಿಡಿಸ್ ಬೆಂಝ್ ನೊಂದಿಗೆ ನಿಕಟವಾಗಿ ಕೆಲಸ ಮಾಡಿದೆ.

ಮರ್ಸಿಡಿಸ್ ಬೆಂಝ್ ತನ್ನ ಪ್ರೀಮಿಯಂ ಮತ್ತು ಐಷಾರಾಮಿ ಕಾರುಗಳ ಲೂಬ್ರಿಕೇಷನ್ ಬೇಡಿಕೆಗಳನ್ನು ಪೂರಂ □□□□□□ೈಸಲು ಭಾರತದಲ್ಲಿ ತನ್ನ ಬಲವಾದ ಸೇವೆ ಮತ್ತು ಮಾರಾಟದ ನಂತರದ ಕೇರ್ ನೆಟ್ ವರ್ಕ್ ಮೂಲಕ ಉನ್ನತ ಮಟ್ಟದ ಗ್ರಾಹಕರು ಎಕ್ಸಾನ್ ಮೊಬಿಲ್ ಅನ್ನು ಅವಲಂಬಿಸಿದೆ.

ಈ ಸಹಭಾಗಿತ್ವವು ಟೆಸ್ಟಿಂಗ್ , ಫೀಲ್ಡ್ ಟ್ರಯಲ್ ಮತ್ತು ದೇಶದ ಕಾರ್ಖಾನೆ ಮತ್ತು ಸೇವಾ ಜಾಲಗಳಿಗೆ ಉತ್ತಮ–ಗುಣಮಟ್ಟದ ಸಂಪೂರ್ಣ ಸಿಂಥೆಟಿಕ್ ಎಂಜಿನ್ ತೈಲಗಳ ಪೂರೈಕೆಯನ್ನು ಒಳಗೊಂಡಿದೆ. ಈ ಪಾಲುದಾರಿಕೆಯು ಭಾರತದಲ್ಲಿ ವಿಕಸನಗೊಳ್ಳುತ್ತಿರುವ ಅತ್ಯಾಧುನಿಕ, ಆಧುನಿಕ ಮತ್ತು ಮಹತ್ವಾಕಾಂಕ್ಷೆಯ ಗ್ರಾಹಕರ ಅಗತ್ಯಗಳಿಗೆ ವಿಶ್ವಾಸ ಮತ್ತು ಮೌಲ್ಯವನ್ನು ತಲುಪಿದೆ. ಇದರಿಂದ ಎಂಜಿನ್ ಗಳು ಅತ್ಯಂತ ದಕ್ಷತೆಯಿಂದ ಕಾರ್ಯನಿರ್ವಹಿಸಲು ಸಾಧ್ಯವಾಗಿದೆ.

ಎಕ್ಸಾನ್ ಮೊಬಿಲ್ ಮಹಾರಾಷ್ಟ್ರದಲ್ಲಿ ವಿಶ್ವದರ್ಜೆಯ ಲೂಬ್ರಿಕೆಂಟ್ ಉತ್ಪಾದನಾ

ಘಟಕವನ್ನು ಸ್ಥಾಪಿಸಲು ಹೂಡಿಕೆ ಮಾಡುವ ಮೂಲಕ ಭಾರತದಲ್ಲಿ ತನ್ನ ಅಸಿ □□□□□□ತ್ವವನ್ನು ಬಲಪಡಿಸಿದೆ. ಸಿಂಥೆಟಿಕ್ ಲೂಬ್ರಿಕೇಷನ್ ಸೈನ್ಸ್ ನ ಪ್ರವರ್ತಕರಾದ ಇದು 1974 ರಲ್ಲಿ ಮೊಬಿಲ್ 1□ ಅನ್ನು ಪ್ರಾರಂಭಿಸುವುದರೊಂದಿಗೆ ಜಾಗತಿಕವಾಗಿ ಸಿಂಥೇಟಿಕ್ ಲೂಬ್ರಿಕೆಂಟ್ ಗಳನ್ನು ಪರಿಚಯಿಸಿದ ಮೊದಲ ಸಂಸ್ಥೆಯಾಗಿದೆ. ಮೊಬಿಲ್ 1□ ಜಾಗತಿಕವಾಗಿ ಅತ್ಯಂತ ವಿಶ್ವಾಸಾರ್ಹ ಮತ್ತು ಸುಧಾರಿತ ಸಿಂಥೆಟಿಕ್ ಮೋಟಾರ್ ಆಯಿಲ್ ಬ್ರಾಂಡ್ ಆಗಿ ತನ್ನ ಸ್ಥಾನಮಾನವನ್ನು ಉಳಿಸಿಕೊಂಡಿದೆ. ಮೊಬಿಲ್ 1□ ಎಂಜಿನ್ ಕಾರ್ಯಕ್ಷಮತೆ ಮತ್ತು ರಕ್ಷಣೆಯಲ್ಲಿ ಹೊಸ ಮಾನದಂಡಗಳನ್ನು ನಿಗದಿಪಡಿಸುತ್ತಿದೆ. ಇದು ವಿಶ್ವದಾದ್ಯಂತದ ಪ್ರಮುಖ ಒಇಎಂಗಳಿಗೆ ವಿಶ್ವಾಸಾರ್ಹ ಲೂಬ್ರಿಕೆಂಟ್ ಆಗಿ ಹೊರಹೊಮ್ಮಿದೆ.

ಈ ಕುರಿತು ಮಾತನಾಡಿದ ಮರ್ಸಿಡಿಸ್ ಬೆಂಝ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಸಂತೋಷ್ ಅಯ್ಯರ್ ಅವರು, "ಮರ್ಸಿಡಿಸ್ ಬೆಂಝ್ ಮತ್ತು ಎಕ್ಸಾನ್ ಮೊಬಿಲ್ ಭಾರತದಲ್ಲಿ 30 ವರ್ಷಗಳನ್ನು ಪೂರೈಸಿದ ಮೈಲಿಗಲ್ಲನ್ನು ಹಂಚಿಕೊಂಡಿವೆ. ನಿರಂತರ ಆವಿಷ್ಕಾರಗಳ ಮೂಲಕ ಗ್ರಾಹಕರ ವಿಶ್ವಾಸವನ್ನು ಹೆಚ್ಚಿಸುವ ದೃಷ್ಟಿಕೋನವನ್ನು □□□□□□ ಹೊಂದಿವೆ. ಎಕ್ಸಾನ್ ಮೊಬಿಲ್ ನಮ್ಮ ಮೋಟಾರು ಆಯಿಲ್ ಸರಬರಾಜಿನೊಂದಿಗೆ ಮರ್ಸಿಡಿಸ್ ಬೆಂಝ್ ಗ್ರಾಹಕರು ಮತ್ತು ಡೀಲರ್ ನೆಟ್ ವರ್ಕ್ ಅನ್ನು ಬೆಂಬಲಿಸುವ ನಮ್ಮ ಅತ್ಯಂತ ವಿಶ್ವಾಸಾರ್ಹ ಪಾಲುದಾರನಾಗಿದೆ. ವಿಶೇಷವಾಗಿ ಸಾಂಕ್ರಾಮಿಕ ರೋಗದಿಂದ ಪೂರೈಕೆ ಅಡೆತಡೆಗಳ ನ್ಯೂ ಮಿರಿಯೂ ಸಹ ಭಾತರದಲ್ಲಿ ಉತ್ಪ □□□□□□ ನ್ನ ಮತ್ತು ಸೇವೆಗಳನ್ನು ಒದಗಿಸಿದೆ. ಇವು ವಿಶ್ವ ದರ್ಜೆಯ ಕೊಡುಗೆಗಳಾಗಿದ್ದು, ನಮ್ಮ ಸಹಯೋಗದ ಮನೋಭಾವವನ್ನು ಪ್ರೇರೇಪಿಸುವ ಗ್ರಾಹಕರ ಉತ್ಸಾಹವನ್ನು ಒತ್ತಿಹೇಳುತ್ತವೆ ಎಂದರು.

ಎಕ್ಸಾನ್ ಮೊಬಿಲ್ ಲೂಬ್ರಿಕೆಂಟ್ಸ್ ಪ್ರೈವೇಟ್ ಲಿಮಿಟೆಡ್ ನ ಸಿಇಒ ವಿಪಿನ್ ರಾಣಾ ಅವರು ಈ ಕುರಿತು ಮಾತನಾಡಿ, ಮರ್ಸಿಡಿಸ್ ಬೆಂಝ್ ಇಂಡಿಯಾದೊಂದಿಗಿನ ನಮ್ಮ ದೀರ್ಘಕಾಲದ ಪಾಲುದಾರಿಕೆ ಜಾಗತಿಕ ಆಟೋಮೊಬೈಲ □□□□□□ ಕಂಪನಿಗಳು ನಂಬಿರುವ ಅತ್ಯಾಧುನಿಕ ಲೂಬ್ರಿಕೇಷನ್ ತಂತ್ರಜ್ಞಾನಕ್ಕೆ ಸಾಕ್ಷಿಯಾಗಿದೆ. ಭಾರತದಾದ್ಯಂತ ಮರ್ಸಿಡಿಸ್ ಬೆಂಝ್ ವಿತರಕರಿಗೆ ಪೂರೈಕೆ ಸರಪಳಿ ಭದ್ರತೆ ಮತ್ತು ವಿಶ್ವಾಸಾರ್ಹತೆಯನ್ನು ಗಳಿಸಿದೆ. ಮರ್ಸಿಡಿಸ್ ಬೆಂಝ್ ಇಂಡಿಯಾ ತನ್ನ ಮುಂದಿನ ಬೆಳವಣಿಗೆಯ □□□□□□ ಯುಗದಲ್ಲಿ ಮರ್ಸಿಡಿಸ್ ಬೆಂಝ್ ಇಂಡಿಯಾದ ಕಾರುಗಳಿಗಾಗಿ ವಿನ್ಯಾಸಗೊಳಿಸಲಾದ ಅತ್ಯುತ್ತಮ ದರ್ಜೆಯ ಎಂಜಿನ್ ಆಯಿಲ್ ಗಳನ್ನು ಒದಗಿಸುವ ಮೂಲಕ ಮತ್ತು ವಿತರಕರು ಗ್ರಾಹಕರನ್ನು ಸಂತೋಷಪಡಿಸಲು ಅನುವು ಮಾಡಿಕೊಡುವ ಮೂಲಕ ಮರ್ಸಿಡಿಸ್ ಬೆಂಝ್ ಇಂಡಿಯಾದ ಪ್ರಯಾಣವನ್ನು ಬೆಂಬಲಿಸಲು ನಾವು ಬದ್ಧರಾಗಿದ್ದೇವೆ. ಅಂತಿಮ ಎಂಜಿನ್ ರಕ್ಷಣೆಯನ್ನು ಒದಗಿಸುವ ನಮ್ಮ ಪ್ರಮುಖ ಸಿಂಥೆಟಿಕ್ ಎಂಜಿನ್ ತೈಲವಾದ ಮೊಬಿಲ್ 1□ ನ 50 ವರ್ಷಗಳ ಸಂಭ್ರಮವನ್ನು ನಾವು ಆಚರಿಸುತ್ತಿರುವುದರಿಂದ ಭಾರತದಲ್ಲಿ ನಮ್ಮ 30 ವರ್ಷಗಳ ಒಡನಾಟವನ್ನು ಸಂಭ್ರಮಿಸುವುದು ನಮಗೆ ತುಂಬಾ ಹೆಮ್ಮೆಯ ಕ್ಷಣವಾಗಿದೆ. ದೇಶದ ಆಟೋಮೋಟಿವ್ ಕ್ಷೇತ್ರದ ಬೆಳವಣಿಗೆಯನ್ನು ಮುನ್ನಡೆಸುವಲ್ಲಿ ಕೀ ಪ್ಲೇಯರ್ ಆಗಿ ಪ್ರಮುಖ ಪಾತ್ರವಹಿಸುತ್ತದೆ ಎಂದರು.

ಅಧ್ಯಕ್ಷರಾಗಿ ಎಂ.ಬಿ ರತಿ ಶ್ರೀಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ

ಗ್ರಾಮ ಪಂಚಾಯತಿಯ ಹಿಂದಿನ ಅಧ್ಯಕ್ಷರಾಗಿದ್ದ ಸುಂದ್ರಮ್ಮ ಮಂಜೇಗೌಡ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಇಂದು ಚುನಾವಣೆ ನಿಗದಿಯಾಗಿತ್ತು. ಅಧ್ಯಕ್ಷ ಸ್ಥಾನ ಬಯಸಿ ಹರಿಹರಪುರ ಎಂ.ಬಿ ರತಿ ಶ್ರೀಧರ್ ಹೊರತುಪಡಿಸಿ ಉಳಿದ ಯಾವ ಸದಸ್ಯರು ನಾಮಪತ್ರ ಸಲ್ಲಿಸದ ಕಾರಣ ಅಂತಿಮವಾಗಿ ನೂತನ ಅಧ್ಯಕ್ಷರಾಗಿ ಎಂ.ಬಿ ರತಿ ಶ್ರೀಧರ್ ಅವರನ್ನ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಲೋಕೇಶ್ ಘೋಷಿಸಿದರು.

ನೂತನ ಅಧ್ಯಕ್ಷರನ್ನ ಅಭಿನಂದಿಸಿ ಮಾತನಾಡಿದ ಗ್ರಾ. ಪಂ ಸದಸ್ಯ ಹಾಗೂ ವಕೀಲ ಬೊಮ್ಮನಹಳ್ಳಿ ಹರ್ಷ ಯಾರಿಗೂ ಅಧಿಕಾರ ಶಾಶ್ವತವಲ್ಲ ನಾವು ಮಾಡುವ ಕೆಲಸಗಳು ಶಾಶ್ವತವಾಗಿರುತ್ತವೆ, ಅವಿರೋಧವಾಗಿ ನಿಮಗೆ ಒಂದು ಸುವರ್ಣ ಅವಕಾಶ ಸಿಕ್ಕಿದೆ ನಿಮ್ಮ ಆಡಳಿತ ಅವಧಿಯಲ್ಲಿ ಪಕ್ಷಾ ಬೇದ ಮರೆತು ಅಭಿವೃದ್ಧಿ ಕಾರ್ಯಗಳ ಕೈಗೊಳ್ಳಬೇಕು ಹಾಗೂ ಗ್ರಾ.ಪಂ.ಗೆ ಇಂದು ನೇರವಾಗಿ ಉದ್ಯೋಗ ಖಾತ್ರಿ ಯೋಜನೆಯಡಿ ಸಾಕಷ್ಟು ಅನುದಾನ ಬರುತ್ತಿದೆ.ಗ್ರಾಮಗಳ ಸಮಗ್ರ ಅಭಿವದ್ಧಿಯ ಜತೆಗೆ ಜನರ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಸಲಹೆ ನೀಡಿದರು.

ಬಳಿಕ ಮಾತನಾಡಿದ ನೂತನ ಅಧ್ಯಕ್ಷೆ ಎಂ.ಬಿ ರತಿ ಶ್ರೀಧರ್ ನನ್ನನ್ನು ಅವಿರೋಧವಾಗಿ ಅಧ್ಯಕ್ಷರಾಗಿ ಆಯ್ಕೆಯಾಗಲು ಸಹಕಾರ ನೀಡಿದ ನಮ್ಮ ಪಂಚಾಯತಿ ಎಲ್ಲಾ ಸದಸ್ಯರು ಹಾಗೂ ಪಂಚಾಯತಿ ವ್ಯಾಪ್ತಿಯ ಮುಖಂಡರಿಗೆ ಧನ್ಯವಾದಗಳನ್ನು ಅರ್ಪಿಸಿದರು. ನನ್ನ ಆಡಳಿತ ಅವಧಿಯಲ್ಲಿ ಪಕ್ಷಭೇದ ಮರೆತು ಸರ್ವ ಸದಸ್ಯರು ಜೊತೆಗೂಡಿ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ಪ್ರತಿ ಗ್ರಾಮಗಳಲ್ಲಿ ರಸ್ತೆ, ಚರಂಡಿ, ವಿದ್ಯುತ್ ದೀಪಗಳು, ಕುಡಿಯುವ ನೀರು, ಜಾನುವಾರು ನೀರು ಕುಡಿಯುವ ತೊಟ್ಟಿ, ಜಾನುವಾರು ಕೊಟ್ಟಿಗೆ ಹಾಗೂ ಕೆರೆ–ಕಟ್ಟೆ ಅಭಿವೃದ್ಧಿ ಇದರ ಜೊತೆಗೆ ಸರ್ಕಾರ ಇಲಾಖೆಯಿಂದ ಬರುವ ಸವಲತ್ತುಗಳನ್ನು ಸದುಪಯೋಗ ಮಾಡಿಕೊಂಡು ಗ್ರಾಮಗಳ ಅಭಿವೃದ್ಧಿಗೆ ಒತ್ತು ನೀಡುತ್ತಾ ಪಂಚಾಯಿತಿಯ ವ್ಯಾಪ್ತಿಯಲ್ಲಿ ಗ್ರಾಮಗಳ ಅಭಿವೃದ್ಧಿ ಶ್ರಮಿಸಿ,ಅಭಿವೃದ್ಧಿ ಕಡೆ ಹೆಚ್ಚಿನ ಗಮನ ಹರಿಸುತ್ತ ನನ್ನ ಅಧಿಕಾರದ ಅವಧಿಯಲ್ಲಿ ಯಾವುದೇ ಲೋಪದೋಷಗಳು ಬರದ ಹಾಗೆ ಸರ್ಕಾರದಿಂದ ಸಾರ್ವಜನಿಕರಿಗೆ ಸಿಗುವ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ಸಿಗುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ಬಳಿಕ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಎಂ.ಬಿ ರತಿ ಶ್ರೀಧರ್ ಅವರನ್ನು ಮಂಡ್ಯ ಜಿಲ್ಲಾ ಹಾಲು ಒಕ್ಕೂಟ ಮಾಜಿ ಅಧ್ಯಕ್ಷ ಎಂ.ಬಿ ಹರೀಶ್, ಕಾಂಗ್ರೆಸ್ ಮುಖಂಡ ಡಾ:ಕೆ ಸಿ ಶ್ರೀಕಾಂತ್,ಸೇರಿದಂತೆ ನೂರಾರು ಬೆಂಬಲಿಗರು ಸಿಹಿ ತಿನಿಸುವ ಮೂಲಕ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಉಪಾಧ್ಯಕ್ಷ ಬಲರಾಮೇಗೌಡ ಸದಸ್ಯರಾದ ಬೊಮ್ಮನಹಳ್ಳಿ ಲತಾ,ಆಶಾ, ದೇವಮ್ಮ, ಜಯಮಣಿ, ಕುಸುಮ, ಹೆಚ್. ಎನ್ ಹರಿಚಂದ್ರ, ದೇವರಾಜು, ಸುಂದ್ರಮ್ಮ, ಜಯರಾಮೇಗೌಡ, ಬಿ ಗಣೇಶಗೌಡ, ಟಿ. ಆರ್ ನಂದೀಶ್, ಸರೋಜಮ್ಮ, ಕತ್ರಘಟ್ಟ ಎಂ.ಕೆ ಪ್ರಸನ್ನ ಕುಮಾರ್, ವಿಜಯ, ನಾಗೇಗೌಡ, ನರಸಿಂಹಮೂರ್ತಿ, ಎಸ್.ಡಿ ರುಕ್ಮಿಣಿ, ಹಿರಿಯ ಮುಖಂಡರಾದ ಹೆಚ್.ವೈ ಜಯಕುಮಾರ್, ಬಿಜೆಪಿ ತಾಲೂಕು ಉಪಾಧ್ಯಕ್ಷ ಕುರ್ನೆನಹಳ್ಳಿ ನವೀನ್ ಕುಮಾರ್ ,ದೀಪಕ್, ಕತ್ರಘಟ್ಟ ವ ಂಹೇಶ್,ಪ್ರದೀಪ್,ರೇವಣ್ಣ,ಸಿದ್ದಲಿಂಗೇಗೌಡ, ದೀಪಕ್, ಮಂಜುನಾಥ್, ಅ.ತಿ ಶ್ರೀನಿವಾಸ್, ಮಾಡುವಿನಕೋಡಿ ನಾಗೇಶ್,ಕಾಂಗ್ರೆಸ್ ಅಲ್ಪಸಂಖ್ಯಾತರ ನಗರ ಘಟಕದ ಅಧ್ಯಕ್ಷ ಅಯಾಜ್ ಷರೀಫ್,ದೀಪು, ಹೊಸಹೊಳಲು ಅನಿಲ್, ಕೊಮ್ಮೆನಹಳ್ಳಿ ಅನಿಲ್, ಸುನಿಲ್,ಸೇರಿದಂತೆ ಉಪಸ್ಥಿತರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆ ಆರ್ ಪೇಟೆ

ಸಿಡಿಲು ಅಬ್ಬರಕ್ಕೆ ಹೊತ್ತಿ ಉರಿದ ತೆಂಗಿನ ಮರ.....

ಹೊಸನಗರ :-ತಾಲೂಕಿನ ನಿಟ್ಟೂರು ಸಮೀಪದ ನಿಡುಗೋಡು ಗ್ರಾಮದಲ್ಲಿ ಮಧ್ಯಾಹ್ನ ಗುಡುಗು ಸಹಿತ ಮಳೆಯಾಗಿದ್ದುಸಿಡಿಲು ಅಬ್ಬರಕ್ಕೆ . ಹೊತ್ತಿ ಉರಿದ ತೆಂಗಿನ ಮರ. ವರದಿ. ತನುಜ್ ಕುಮಾರ್ ಹೊಸನಗರ.

ಜೆಇ ಸಂತೋಷ್ ವಿರುದ್ದ ರೈತ ಸಂಘ ಪ್ರತಿಭಟನೆ

ಮದ್ದೂರು: ತಾಲೂಕಿನ ಬೆಸಗರಹಳ್ಳಿ ಗ್ರಾಮದ ಸೆಸ್ಕ್ ಸಹಾಯಕ ಇಂಜಿನಿಯರ್ ಸಂತೋಷ್ ಅವರ ವಿರುದ್ದ ಕ್ರಮ ಕೈಗೊಳ್ಳಬೇಕು ಹಾಗೂ ಅಧಿಕಾರಿಗಳು ರೈತರೊಂದಿಗೆ ಸೌಜನ್ಯಯುತವಾಗಿ ವರ್ತಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಬೆಸಗರಹಳ್ಳಿ ವಿದ್ಯುತ್ ಶಾಖಾ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಲಾಯಿತು.

ಸೆಸ್ಕ್ ಕಚೇರಿ ಮುಂದೆ ಜಮಾಯಿಸಿದ ರೈತ ಸಂಘದ ಕಾರ್ಯಕರ್ತರು ಅಧಿಕಾರಿಗಳ ವಿರುದ್ದ ಘೋಷಣೆಗಳನ್ನು ಕೂಗಿ ಸ್ಥಳದಲ್ಲೆ ಅಡುಗೆ ಮಾಡಿ ಮಂಗಳವಾರ ಆಕ್ರೋಶ ವ್ಯಕ್ತಪಡಿಸಿದರು.

ರೇಷ್ಮೆ ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ಗುಡಿದೊಡ್ಡಿ ಶಿವಲಿಂಗಯ್ಯ ಮಾತನಾಡಿ, ಬೆಸಗರಹಳ್ಳಿ ವಿದ್ಯುತ್ ಶಾಖಾ ಕಚೇರಿಯ ಹಿರಿಯ ಸಹಾಯಕ ಇಂಜಿನಿಯರ್ ಸಂತೋಷ್ ಅವರು ಕಳೆದ 14 ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಹಲವು ಅಕ್ರಮಗಳಲ್ಲಿ ಭಾಗಿಯಾಗಿದ್ದಾರೆ. ಈ ಬಗ್ಗೆ ಹಿರಿಯ ಅಧಿಕಾರಿಗಳಿಗೆ ದೂರು ನೀಡಿದರು ಯಾವುದೇ ಕಾನೂನು ಕ್ರಮ ತೆಗೆದುಕೊಳ್ಳದಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ರೈತರೊಂದಿಗೆ ಸೌಜನ್ಯಯುತವಾಗಿ ವರ್ತಿಸದೆ ಉಡಾಫೆಯ ಧೋರಣೆಯ ಅನುಸರಿಸುತ್ತಿದ್ದಾರೆಂದು ಆರೋಪಿಸಿದರು.

ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ಜಿಲ್ಲಾಧ್ಯಕ್ಷ ವಳಗೆರಹಳ್ಳಿ ವಿ.ಸಿ.ಉಮಾಶಂಕರ್ ಮಾತನಾಡಿ, ಒಂದೇ ಸ್ಥಳದಲ್ಲಿ 14 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವುದು ಹಾಗೂ ಇವರನ್ನು ಬೇರೆ ಕಡೆಗೆ ವರ್ಗಾವಣೆ ಗೆ ಮಾಡದಿರುವುದು ಸೆಸ್ಕ್ ಹಿರಿಯ ಅಧಿಕಾರಿಗಳು ಹಾಗೂ ಸರ್ಕಾರ ಲೋಪವಾಗಿದ್ದು, ಸೆಸ್ಕ್ ಸಹಾಯಕ ಇಂಜಿನಿಯರ್ ಸಂತೋಷ್ ಅವರನ್ನು ಈ ಕೂಡಲೇ ಬೇರೆ ಕಡೆಗೆ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾ ಸ್ಥಳಕ್ಕೆ ಸೆಸ್ಕ್ ಕಾರ್ಯಪಾಲಕ ಇಂಜಿನಿಯರ್ ಮೋಹನ್ ಆಗಮಿಸಿ, ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ ಮಾತನಾಡಿ, ನಿಮ್ಮ ಮನವಿಯನ್ನು ಮೇಲಾಧಿಕಾರಿಗಳ ಗಮನಕೆ ತರಲಾಗಿದೆ. ಶೀಘ್ರವಾಗಿ ಈ ಸಂಬಂಧ ಅವರು ಪರಿಶೀಲಿಸಿ ಕ್ರಮಕೈಗೊಳ್ಳಲಿದ್ದಾರೆಂದು ಎಂದು ತಿಳಿಸಿದ ನಂತರ ಪ್ರತಿಭಟನೆ ಹಿಂಪಡೆಯಲಾಯಿತು.

ರೈತ ಸಂಘದ ಮುಖಂಡರಾದ ಅಣ್ಣೂರು ಮಹೇಂದ್ರ, ಕೀಳಘಟ್ಟ ನಂಜುಂಡಯ್ಯ, ಕೆ.ರಾಮಲಿಂಗೇಗೌಡ, ಕೀಲಾರ ಸೋಮಣ್ಣ, ಕೆ.ಜಿ.ಉಮೇಶ್, ಲಿಂಗರಾಜು, ಅರಗಿನಮೇಳೆ ರಾಮೇಗೌಡ, ಸೊಳ್ಳೆಪುರ ದಯಾನಂದ್, ಪ್ರಭುಲಿಂಗ, ಪಣ್ಣೆದೊಡ್ಡಿ ವೆಂಕಟೇಶ, ರಮೇಶ್, ಶಿವಾರ ರಾಮಕೃಷ್ಣಪ್ಪ, ರಾಮಸ್ವಾಮಿ, ಡಿ.ಎ.ಕೆರೆ ರಮೇಶ್, ಉಮೇಶ್, ಡಿ.ಕೆ.ಚಂದ್ರ, ಕುಮಾರ, ಅಶ್ವಥ್ ಇದ್ದರು.

ಇಂಡಿಯಾ ಸ್ಕಿಲ್ಸ್ ಸ್ಪರ್ಧೆ: ಹೊಸ ಯುಗದ ಕೌಶಲ್ಯಗಳ ಕ್ಷೇತ್ರದಲ್ಲಿ ಕರ್ನಾಟಕದ ವಿಜೇತರಿಗೆ ವೃತ್ತಿಜೀವನದ ಭರವಸೆಯ ಮಾರ್ಗ

ಕರ್ನಾಟಕದ ಮೂಲದ, ಮುಸ್ತಫಾನ್ ಬಿಜಾಪುರ ಅವರು ಉತ್ಪನ್ನಗಳನ್ನು ವಿನ್ಯಾಸಗೊಳಿಸುವ ಮತ್ತು ತಯಾರಿಸುವ ವಿಧಾನವನ್ನು ಸಂಪೂರ್ಣವಾಗಿ ಬದಲಿಸುವ ಕನಸನ್ನು ಕಂಡಿದ್ದರು. ತಂತ್ರಜ್ಞಾನಕ್ಕೆ ಸಂಬಂಧಪಟ್ಟ ಉದ್ಯಮದ ಮೇಲೆ ಮಹತ್ತರವಾದ ಬದಲಾವಣೆಯನ್ನು ತರುವ ಅವರ ಹಂಬಲವು ಅವರು 2019 ರಲ್ಲಿ ವೃತ್ತಿಪರ ತರಬೇತಿ ಕೇಂದ್ರವನ್ನು ಸೇರಲು ಕಾರಣವಾಯಿತು. ತಮ್ಮ ಪ್ರೌಢ ಶಿಕ್ಷಣ ಮುಗಿಸಿದ ನಂತರ ಅಲ್ಲಿ ಅವರು ಮೆಕಾಟ್ರಾನಿಕ್ಸ್ ಅನ್ನು ಕುರಿತು ತರಬೇತಿಯನ್ನು ಪಡೆದುಕೊಂಡರು.

ಅವರು ತರಬೇತಿಯಲ್ಲಿದ್ದಾಗ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯದ (ಒಖಆಇ) ಆಶ್ರಯದಲ್ಲಿ ರಾಷ್ಟ್ರೀಯ ಕೌಶಲ್ಯ ಅಭಿವೃದ್ಧಿ ನಿಗಮವು (ಓಖಆಅ) ಭಾರತದಾದ್ಯಂತ ಆಯೋಜಿಸುವ ಸ್ಪರ್ಧೆಯಾದ ಇಂಡಿಯಾಸ್ಕಿಲ್ಸ್ 2024 ಬಗ್ಗೆ ಅವರಿಗೆ ತಿಳಿಯಿತು. ಇದು ಅವರು ವರ್ಷಾನುಗಟ್ಟಲೆ ತೊಡಗಿಸಿಕೊಂಡು ಕಲಿತಿದ್ದ ಕೌಶಲ್ಯವನ್ನು ಪ್ರದರ್ಶಿಸಲು ಹಾಗೂ ವೈಶ್ವಿಕ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸಲು ಅತ್ಯುತ್ತಮವಾದ ಅವಕಾಶವಾಗಿತ್ತು. ಅವರು "ಸ್ಕಿಲ್ ಇಂಡಿಯಾ ಡಿಜಿಟಲ್ ಹಬ್" (ಖಆಆಊ) ಪೋರ್ಟಲ್‌ನಲ್ಲಿ ಸ್ಪರ್ಧೆಗೆ ನೋಂದಾಯಿಸಿಕೊಂಡರು.

ಸಂಪನ್ಮೂಲಗಳ ಕೊರತೆಯಿದ್ದರೂ ಸಹ, ಮುಸ್ತಫಾನ್ ಅವರು ಅವರಿಗೆ ಲಭ್ಯವಿದ್ದಷ್ಟು ಟೂಲ್‌ಗಳ ಮೂಲಕ ತಮ್ಮ ಕೌಶಲ್ಯವನ್ನು ಸಾಬೀತುಪಡಿಸಿದರು, ಇದು ಅವರ ಸಂಪನ್ಮೂಲಗಳನ್ನು ಬಳಸಿಕೊಳ್ಳುವ ಜಾಣ್ಮೆಗೆ ಸಾಕ್ಷಿಯಾಗಿದೆ. ಈ ರಚನಾತ್ಮಕ

ವರ್ಷಗಳು ಅವರ ಚಾರಿತ್ರ್ಯವನ್ನು ಹೆಣೆಯುವ ಆಧಾರ ಸ್ತಂಭಗಳಾದವು. ಅವರು ತಮ್ಮ ದಾರಿಯಲ್ಲಿ ಹಾದುಹೋಗುವ ಪ್ರತಿಯೊಂದು ಅವಕಾಶದಿಂದ ಹೊಸ ಪ್ರತಿಭೆಯನ್ನು ಕಂಡುಕೊಳ್ಳುವ ಅಸಾಧಾರಣ ಸಾಮರ್ಥ್ಯವನ್ನು ಹೊಂದಿದ್ದಾರೆ.

ತನ್ನ ಪ್ರತಿಭೆಯನ್ನು ಸಾಬೀತುಪಡಿಸಲು ನಿರ್ಧರಿಸಿದ ಅವರು ಸ್ಪರ್ಧೆಗಾಗಿ ಕಠಿಣ ತರಬೇತಿಯನ್ನು ಪ್ರಾರಂಭಿಸಿದರು. ಈ ತರಬೇತಿಯು ನೋಡ್–ರೆಡ್ ಪ್ರೋಗ್ರಾಮಿಂಗ್, ಪಿ ಎಲ್ ಸಿ ಪ್ರೋಗ್ರಾಮಿಂಗ್, ಫೆಸ್ಟೋ ಎಂ ಪಿ ಎಸ್ ಕಿಟ್ ಪ್ರೋಗ್ರಾಮಿಂಗ್, ನೆಟ್‌ವರ್ಕಿಂಗ್ ಮತ್ತು ಔಇಆ/no ಸಾಫ್ಟ್‌ವೇರ್‌ನಂತಹ ತಾಂತ್ರಿಕ ಸಾಮರ್ಥ್ಯಗಳ ಬಗ್ಗೆ ಅವರ ತಿಳುವಳಿಕೆಯನ್ನು ಸಮೃದ್ಧಗೊಳಿಸಿತು. ಅವರು ಪ್ರಾಯೋಗಿಕ ಶಿಬಿರಗಳ ಮೂಲಕ (ಬೂಟ್ ಕ್ಯಾಂಪ್) ಪ್ರತಿದಿನ 08 ಗಂಟೆಗಳ ದಿನನಿತ್ಯದ ತರಬೇತಿಯನ್ನು ಪಡೆದುಕೊಳ್ಳುತ್ತಿದ್ದರು.

ಇದು ಅವರಿಗೆ ಪ್ರಾಯೋಗಿಕವಾಗಿ ಈ ತಂತ್ರಜ್ಞಾನಗಳನ್ನು ಕೈಗಾರಿಕೆಗಳಲ್ಲಿ ಅಳವಡಿಸಲು ಹೇಗೆ ಬಳಸಲಾಗುತ್ತದೆ ಎಂಬುದನ್ನು ಕುರಿತು ಆಳವಾದ ತಿಳುವಳಿಕೆಯನ್ನು ನೀಡಿತು.

ತಮ್ಮ ಎಲ್ಲಾ ಪ್ರಯತ್ನಗಳ ಮೂಲಕ ಅವರು ರಾಜ್ಯ ಮಟ್ಟದಲ್ಲಿ ಇಂಡಸ್ಟ್ರಿ 4.0 ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಪಡೆದರು, ಇದು ಅವರಿಗೆ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸ್ಪರ್ಧೆಗಳಲ್ಲಿ ಭಾಗವಹಿಸಲು ದಾರಿ ಮಾಡಿಕೊಟ್ಟಿತು.

ಈ ಸ್ಪರ್ಧೆಯು, ಫೆಸ್ಟೋ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಬೆಂಗಳೂರು, ಸಂಸ್ಥೆಯಲ್ಲಿ ಮಾರ್ಚ್ 4 ರಿಂದ 6 ರವರೆಗೆ ನಡೆಯಿತು. ಮಾತ್ರ ರಾಜ್ಯದಿಂದ ಸುಮಾರು 50 ಅಭ್ಯರ್ಥಿಗಳು ಇಂಡಿಯಾ ಸ್ಕಿಲ್ಸ್ ಸ್ಪರ್ಧೆಗೆ ಆಯ್ಕೆಯಾಗಿದ್ದರು; ಮಾತ್ರವಲ್ಲ ಅವರು ಸ್ಪರ್ಧೆಯ ಮೂಲಕ ಕಲಿತುಕೊಂಡ ಕೌಶಲ್ಯಗಳು ಅವರಿಗೆ ಬೆಂಗಳೂರಿನ ಟಾಸ್ಟೋ ಇಮೇಜಿಂಗ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯಲ್ಲಿ ಉದ್ಯೋಗವನ್ನು ಖಾತ್ರಿಪಡಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದವು.

ಈ ವರ್ಷ, ಸ್ಪರ್ಧೆಯಲ್ಲಿ ಭಾಗವಹಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಿದೆ, 30 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪ್ರತಿನಿಧಿಗಳು ಸೇರಿ ಒಟ್ಟು 61 ಕೌಶಲ್ಯಗಳಲ್ಲಿ ಸ್ಪರ್ಧಿಸುತ್ತಿದ್ದಾರೆ. ಕಳೆದ ವರ್ಷಕ್ಕೆ ಹೋಲಿಸಿದರೆ ಇದು ಗಣನೀಯವಾಗಿ ಹೆಚ್ಚಿದೆ, 2021 ರಲ್ಲಿ 26 ರಾಜ್ಯಗಳು ಮತ್ತು ದ್ವಾಡಳಿತ ಪ್ರದೇಶಗಳು ಸೇರಿ ಒಟ್ಟು 54 ಕೌಶಲ್ಯಗಳಲ್ಲಿ ಸ್ಪರ್ಧಿಸಿದ್ದರು. ಇದು ವರ್ಲ್ಡ್ ಸ್ಕಿಲ್ಸ್‌ನಲ್ಲಿ ಭಾರತದ ಶ್ರೇಯಾಂಕದ ಏಳಿಗೆಯನ್ನು ಸೂಚಿಸುತ್ತದೆ, ಜಾಗತಿಕ ಮಟ್ಟದಲ್ಲಿ, ದೇಶದ ಪ್ರತಿಭಾಶೀಲತೆಯನ್ನು ಪರಿಗಣಿಸುವ ಪ್ರಮಾಣವನ್ನು ಹೆಚ್ಚಿಸುತ್ತದೆ ಹಾಗೂ ಯುವಕರಿಗೆ ಉದ್ಯೋಗಾವಕಾಶಗಳನ್ನು ನಿರೀಕ್ಷೆಗಳನ್ನು ಬೆಳೆಸುತ್ತದೆ.

ಇಂಡಿಯಾಸ್ಕಿಲ್ಸ್‌ನಂತಹ ಕಾರ್ಯಕ್ರಮಗಳು ಉದಯೋನ್ಮುಖ ವೃತ್ತಿಪರರ ವೃತ್ತಿಜೀವನವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತವೆ ಮತ್ತು ಅವರು ಪರಿಣತಿಯನ್ನು ಹೊಂದಿರುವ ಕೌಶಲ್ಯಗಳನ್ನು ಸಾಬೀತು ಪಡಿಸಲು ವೇದಿಕೆಯನ್ನು ಒದಗಿಸುತ್ತವೆ; ಮಾತ್ರವಲ್ಲ ಈ ಪ್ರತಿಷ್ಠಿತ ಸ್ಪರ್ಧೆಗಳು ಸರ್ಕಾರಗಳು, ಕೈಗಾರಿಕೆಗಳು ಮತ್ತು ಶಿಕ್ಷಣ ತಜ್ಞರ ನಡುವೆ ಸಹಯೋಗವನ್ನು ಬೆಳೆಸುತ್ತವೆ ಆ ಮೂಲಕ ಕೌಶಲ್ಯದ ಅಂತರವನ್ನು ದೂರಗೊಳಿಸಲು ಸೇತುವೆಯಾಗಿ ಯುವಕರನ್ನು ಕ್ರಿಯಾತ್ಮಕ ಉದ್ಯೋಗದ ಮಾರುಕಟ್ಟೆಗೆ ಸಿದ್ಧಪಡಿಸುತ್ತವೆ.

ತಾಲೂಕಿನ ಬೆಸಗರಹಳ್ಳಿ ಗ್ರಾಮದ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೋಣಸಾಲೆ ಎನ್.ನಿಂಗರಾಜು ಅವರು ಅವಿರೋಧವಾಗಿ ಆಯ್ಕೆಯಾದರು. ಹಿಂದಿನ ಅಧ್ಯಕ್ಷರಾಗಿದ್ದ ಜಿ.ಎಸ್. ಕೃಷ್ಣಯ್ಯ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಎನ್.ನಿಂಗರಾಜು ಅವರನ್ನು ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಇವರ ಆಯ್ಕೆಯನ್ನು ಚುನಾವಣಾಧಿಕಾರಿ ಜಿ.ಆರ್.ಸುಧಾ ಘೋಷಣೆ ಮಾಡಿದರು. ನೂತನ ಅಧ್ಯಕ್ಷ ಎನ್.ನಿಂಗರಾಜು ಮಾತನಾಡಿ, ಷೇರುದಾರರಿಗೆ ಮತ್ತು ರೈತರಿಗೆ ಗುಣಮಟ್ಟದ ಸೇವೆಯನ್ನು ಒದಗಿಸಲು ಮತ್ತು ರೈತರಿಗೆ ಕಾಲ ಕಾಲಕ್ಕೆ ರಾಸಾಯಾನಿಕ ಗೊಬ್ಬರ, ಸಕಾಲಕ್ಕೆ ಸಾಲ ಸೌಲಭ್ಯ ಕೊಡಿಸಲು ಪ್ರಮಾಣಿಕವಾಗಿ ಶ್ರಮಿಸುತ್ತೇನೆ. ನಾನು ಅವಿರೋಧವಾಗಿ ಸಂಘದ ಅಧ್ಯಕ್ಷನಾಗಲು ಸಹಕರಿಸಿದ ಎಲ್ಲಾ ನಿರ್ದೇಶಕರನ್ನು ವಿಶ್ವಾಸ ಅಭಿನಂದಿಸಲಾಗುವುದು ಎಂದರು. ಸಂಘದ ಉಪಾಧ್ಯಕ್ಷ ಡಿ.ರೇವಣ್ಣ, ನಿರ್ದೇಶಕರಾದ ಕೆ.ಎಂ.ಪದ್ಮನಾಭ, ಕೆ.ಜಿ.ಶಂಕರಯ್ಯ, ಎಂ.ಎಚ್.ಜೀವನ್, ರವಿಕಾಂತ, ಜಿ.ಎಸ್.ಹರಿಪ್ರಸಾದ್, ಜಿ.ಎಸ್.ಕೃಷ್ಣಯ್ಯ, ಎಚ್. ಎಸ್.ಸುನೀಲ್ ಕುಮಾರ್, ಗೀತಾ,ವಿಜಯ ಶಂಕರ್, ವೃತ್ತ ಮೇಲ್ವಿಚಾರಕ ಎಚ್.ಎಲ್.ಹರೀಶ್, ಸಂಘದ ಸಿಇಒ ಕೆ.ಸುಮಿತ್ರ ಮುಖಂಡರಾದ ಮುಖಂಡರಾದ ಎಂ.ಜಿ. ವೆಂಕಟೇಶ್, ವಾಸು, ಯೋಗಾನಂದ, ಸ್ವಾಮಿ, ಹನುಮಂತ, ಅಭಿಷೇಕ್ ಗೌಡ ಇದ್ದರು.

MUNJANEVARTHE KANNADA DAILY, EDITOR, PRINTER PUBLISHED And OWNED BY H.L.Amaranth, and Printed at: Sree Manjunatha enterprises, No.30Subbannachan Lane 1st Cross, Cottenpet Bangalore-560053, MOB: 91414 14119 Published at: No.97, 2nd Cross, Vivekananda Nagar, Khadi commision layout, BSK 3rd Stage, Katharaguppe Main Road, Bangalore 560085